# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 164 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 17–01–2025 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 164 | RNI No: KARKAN/2023/88462 | KA/SK/CTA-874/2024-2026 | Chitradurga | Date: 17-01-2025 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಸರ್ಕಾರದಿಂದ ಅಲೆಮಾರಿ, ಅರೆ ಅಲೆಮಾರಿಗಳಿಗೆ ಅನ್ಯಾಯ 2
ರೈತ ಒಕ್ಕೂಟದ ಹೇಳಿಕೆಗೆ ಜಿಲ್ಲಾ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಖಂಡನೆ 3
ಜನವರಿ ಅಂತ್ಯದೊಳಗೆ ಚಳ್ಳಕೆರೆ ತಾಲ್ಲೂಕಿಗೆ ತುಂಗಾ ಹಿನ್ನೀರು? 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಮಾಜಿ ದೇವದಾಸಿ ಮಹಿಳೆಯರಿಗೆ ಅರಿವು ಕಾರ್ಯಕ್ರಮ

» ದಾವಣಗೆರೆ

ಜನವರಿ 17 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಗಾಂಧಿನಗರದಲ್ಲಿರುವ ಅಂಬೇಡ್ಕರ್ ಭವನದಲ್ಲಿ ದೇವದಾಸಿ ಸಮರ್ಪಣೆ ನಿಷೇಧ ಕುರಿತು ಮಾಜಿ ದೇವದಾಸಿ ಮಹಿಳೆಯರಿಗೆ ಅರಿವು ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ರಾಜಾನಾಯ್ಕ ತಿಳಿಸಿದ್ದಾರೆ.

### ಘನತ್ಯಾಜ್ಯ ವಿಲೇವಾರಿ ಘಟಕ ನಿರ್ಬಂಧಿತ ಪ್ರದೇಶವೆಂದು ಘೋಷಿಸಿದೆ

» ದಾವಣಗೆರೆ

ಅವರಗೊಳ್ಳ ಗ್ರಾಮದ ಹತ್ತಿರ ಇರುವ ಮಹಾನಗರಪಾಲಿಕೆ ಒಡೆತನದಲ್ಲಿರುವ 33 ಎಕರೆ ವ್ಯಾಪ್ತಿಯ ಘನತ್ಯಾಜ್ಯ ವಿಲೇವಾರಿ ಘಟಕದ ಸರ್ವೆ ನಂ 117/2, 119, 123, 129, 129/1, 129/2, 129/4, 130/1 ಪ್ರದೇಶಗಳು ಸಂಪೂರ್ಣವಾಗಿ ನಿರ್ಬಂಧಿತ ಪ್ರದೇಶವೆಂದು ಘೋಷಿಸಲಾಗಿದೆ. ಯಾವುದೇ ಅನಧಿಕೃತ ವಾಹನಗಳಾಗಲಿ, ವ್ಯಕ್ತಿಗಳಾಗಲಿ, ಜಾನುವಾರುಗಳಾಗಲಿ ಪೂರ್ವಾನುಮತಿ ಇಲ್ಲದೇ ಪ್ರವೇಶವಿರುವುದಿಲ್ಲ. ಒಂದು ವೇಳೆ ಯಾವುದೇ ವ್ಯಕ್ತಿ, ವಾಹನ, ಜಾನುವಾರುಗಳು ಮಹಾನಗರಪಾಲಿಕೆಯ ಅನುಮತಿ ಇಲ್ಲದೆ ಅನಧಿಕೃತವಾಗಿ ಪ್ರವೇಶಿಸುವುದು ಹಾಗೂ ನುಸುಳಿ ಯಾವುದೇ ರೀತಿಯ ಅನಾಹುತಕೊಳಗಾದಲ್ಲಿ ಪಾಲಿಕೆ ಜವಾಬ್ದಾರಿಯಾಗಿರುವುದಿಲ್ಲ ಎಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

### ವಿದ್ಯುತ್ ವ್ಯತ್ಯಯ

» ದಾವಣಗೆರೆ

ಆನಗೋಡು ಮತ್ತು ಅತ್ತೀಗೆರೆ ವಿದ್ಯುತ್ ಕೇಂದ್ರದ ಮಾರ್ಗ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾರ್ಯವನ್ನು ಹಮ್ಮಿಕೊಂಡಿರುವುದರಿಂದ, ಜನವರಿ 17 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಆನಗೋಡು ಫೀಡರ್ ವ್ಯಾಪ್ತಿಯ ಹನುಮನಹಳ್ಳಿ, ಕೊಗ್ಗನೂರು, ಹನುಮನಹಳ್ಳಿ, ಆನಗೋಡು, ಹೆಬ್ಬಾಳು, ನೀರ್ಥಡಿ, ಶಿವಪುರ, ಹಾಲುವರ್ತಿ, ಗಂಗನಕಟ್ಟೆ, ನೇರ್ಲಿಗಿ, ಚಿನ್ನಸಮುದ್ರ ಗ್ರಾಮಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳು ಮತ್ತು ಆರಾಧ್ಯಾ ಕೈಗಾರಿಕೆ. ಅತ್ತಿಗೆರೆ ಫೀಡರ್ ವ್ಯಾಪ್ತಿಯ ಅತ್ತಿಗೆರೆ, ಕುರ್ಕಿ, ಬಾಡ, ಕಬ್ಬೂರು, ಹೀರೆತೊಗಲೇರಿ, ಗೋಪಾನಾಳು, ಕಂದ್ಗಲ್, ರಾಮಗೊಂಡನಹಳ್ಳಿ, ಕಾಶೀಪುರ ಗ್ರಾಮಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

### ರಾಜ್ಯ ಸರ್ಕಾರದಿಂದ 'ಅನುಕಂಪದ ಆಧಾರದ ನೇಮಕಾತಿ' ಕುರಿತು ಮಹತ್ವದ ಆದೇಶ

» ಬೆಂಗಳೂರು

ರಾಜ್ಯ ಸರ್ಕಾರದಿದಂ ಅನುಕಂಪದ ಆಧಾರದ ನೇಮಕಾತಿ ನೀಡುವ ಸಂದರ್ಭದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳಿಗೆ ಅನ್ಯಾಯವಾಗದಂತೆ ಕ್ರಮವಹಿಸುವ ಕುರಿತು ಮಹತ್ವದ ಆದೇಶ ಹೊರಡಿಸಿದೆ. ಈ ಸಂಬಂಧ ಗೆಜೆಟ್ ಅಧಿಸೂಚನೆಯನ್ನು ಹೊರಡಿಸಲಾಗಿದ್ದು, ಸರ್ಕಾರಿ ನೌಕರನು ಸೇವೆಯಲ್ಲಿರುವಾಗಲೇ ಮೃತಪಟ್ಟಲ್ಲಿ ಆತನ ಅವಲಂಬಿತರಲ್ಲಿ ಒಬ್ಬರಿಗೆ ಕರ್ನಾಟಕ ಸಿವಿಲ್ ಸೇವಾ (ಅನುಕಂಪದ ಆಧಾರದ ಮೇಲೆ ನೇಮಕಾತಿ) ನಿಯಮಗಳು 1996 ರನ್ವಯ ಅರ್ಹತೆಯ ಆಧಾರದ ಮೇಲೆ ಅನುಕಂಪದ ಆಧಾರದ ನೇಮಕಾತಿಯನ್ನು ನೀಡಲು ಅವಕಾಶ ಕಲ್ಪಿಸಲಾಗಿದೆ. ಆದರೆ, ಸದರಿ ಅನುಕಂಪದ ಆಧಾರದ ನೌಕರಿಯನ್ನು ಸರ್ಕಾರಿ ನೌಕರನು ಸೇವೆಯಲ್ಲಿರುವಾಗಲೇ ಮೃತನಾದಲ್ಲಿ ಆತನ ಕುಟುಂಬಕ್ಕೆ ಉಂಟಾಗುವ ಆರ್ಥಿಕ ಸ್ಟೋಭೆಯನ್ನು ತಡೆಯಲು ನೀಡುವಂತಹ ವ್ಯವಸ್ಥೆಯಾಗಿದ್ದರೂ ಇದನ್ನು ಹಕ್ಕೊತ್ತಾಯ ಮಾಡಲು ಅವಕಾಶವಿರುವುದಿಲ್ಲ. ಈ ನಿಯಮಗಳಲ್ಲಿ ಅನುಕಂಪದ ನೇಮಕಾತಿಗಾಗಿ ನಿಗಧಿಪಡಿಸಿರುವ ಎಲ್ಲಾ ಷರತ್ತು ಮತ್ತು ನಿಬಂಧನೆಗಳನ್ನು ಅರ್ಜಿದಾರರು ಪೂರೈಸಿದಲ್ಲಿ ಮಾತ್ರ ಅನುಕಂಪದ ನೇಮಕಾತಿಗಾಗಿ ಪರಿಗಣಿಸಬಹುದಾಗಿದೆ ಎಂದಿದೆ.

ಪುಟ 2

### ಜ.19 ಮತ್ತು 25 ರಂದು ವಿವಿಧ ಇಲಾಖೆಗಳ ಗ್ರೂಪ್–ಬಿ ಸ್ಪರ್ಧಾತ್ಮಕ ಪರೀಕ್ಷೆ

# ಅಭ್ಯರ್ಥಿಗಳು ಪರೀಕ್ಷಾ ಮಾರ್ಗಸೂಚಿ ಪಾಲಿಸಿ

» ಚಿತ್ರದುರ್ಗ

ಇದೇ ಜ.19 ಮತ್ತು 25 ರಂದು ಕೆಪಿಎಸ್‌ಸಿ ವತಿಯಿಂದ ವಿವಿಧ ಇಲಾಖೆಗಳ ಗ್ರೂಪ್ ಬಿ ಉಳಿಕೆ ಮೂಲ ವೃಂದದಲ್ಲಿನ ಹುದ್ದೆಗಳ ನೇಮಕಾತಿಗಾಗಿ ಸ್ಪರ್ಧಾತ್ಮಕ ಪರೀಕ್ಷೆ ನಡೆಯಲಿದೆ. ಅಭ್ಯರ್ಥಿಗಳು ಕಡ್ಡಾಯವಾಗಿ ಕೆಪಿಎಸ್‌ಸಿ ಹೊರಡಿಸಿರುವ ಪರೀಕ್ಷಾ ಮಾರ್ಗಸೂಚಿಗಳನ್ನು ಪಾಲಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚಿಸಿದರು.

ಈ ಕುರಿತು ಗುರುವಾರ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.



ಪರೀಕ್ಷಾ ಅಕ್ರಮಗಳನ್ನು ತಡೆಯುವ ದೃಷ್ಟಿಯಿಂದ ಕೆಪಿಎಸ್‌ಸಿ ಅಭ್ಯರ್ಥಿಗಳು ಪಾಲಿಸಬೇಕಾದ ಪರೀಕ್ಷಾ ಮಾರ್ಗಸೂಚಿಗಳನ್ನು ರೂಪಿಸಿದೆ. ಆನ್‌ಲೈನ್ ಮೂಲಕ ಡೌನ್‌ಲೋಡ್ ಮಾಡಿಕೊಳ್ಳುವ ಪ್ರವೇಶ ಪತ್ರದಲ್ಲಿ ಅಭ್ಯರ್ಥಿಗಳು ಈ ಸೂಚನೆಗಳು ಓದಿ ಪಾಲಿಸಬೇಕು. ಅಭ್ಯರ್ಥಿಗಳು ಡೌನ್ ಲೋಡ್ ಮಾಡಿಕೊಂಡ ಪ್ರವೇಶ ಪತ್ರವನ್ನು ಹಾಗೂ ಅಭ್ಯರ್ಥಿಯ ಭಾವಚಿತ್ರವಿರುವ ಚುನಾವಣಾ ಐಡಿ, ಆಧಾರ್ ಕಾರ್ಡ್, ಡ್ರೈವಿಂಗ್ ಲೈಸನ್ಸ್, ಪ್ಯಾನ್ ಕಾರ್ಡ್, ಪಾಸ್‌ಪೋರ್ಟ್, ಸರ್ಕಾರಿ ನೌಕರರ ಮೂಲ ಗುರುತಿನ ಚೀಟಿ ಪರಿಶೀಲನೆ ನಂತರವೇ ಪರೀಕ್ಷಾ ಕೇಂದ್ರಕ್ಕೆ ಪ್ರವೇಶ ನೀಡಲಾಗುವುದು. ಮೂಲ ಗುರುತಿನ ಚೀಟಿ ಹಾಜರುಪಡಿಸದ ಅಭ್ಯರ್ಥಿಗಳಿಗೆ ಪರೀಕ್ಷಾ ಉಪಕೇಂದ್ರವನ್ನು ಪ್ರವೇಶಿಸಲು ಅನುಮತಿ ನೀಡುವುದಿಲ್ಲ. ಕೊಠಡಿಯೊಳಗೆ ಯಾವುದೇ ಆಧುನಿಕ ಉಪಕರಣಗಳಾದ ಮೊಬೈಲ್, ಬ್ಲೂಟೂತ್, ಕ್ಯಾಲ್ಕುಲೇಟರ್, ವೈಟ್ ಫ್ಲೂಯಿಡ್, ವೈರ್‌ಲೆಸ್ ಸೆಟ್, ಪೇಪರ್, ಬುಕ್‌ಗಳನ್ನು ತೆಗೆದುಕೊಂಡು ಹೋಗುವಂತಿಲ್ಲ.

ಅಭ್ಯರ್ಥಿಗಳು ತುಂಬು ತೋಳಿನ ಶರ್ಟ್ ಧರಿಸುವಂತಿಲ್ಲ. ಮಂಗಳ ಸೂತ್ರ ಮತ್ತು ಕಾಲುಂಗುರವನ್ನು ಹೊರತುಪಡಿಸಿ ಯಾವುದೇ ಇತರೆ ಆಭರಣಗಳು ಪುಲ್‌ವೋವರ್ಸ್, ಜಾಕೆಟ್ ಮತ್ತು ಸ್ವೆಟರ್ ಗಳನ್ನು ಧರಿಸಿ ಪರೀಕ್ಷೆಗೆ ಹಾಜರಾಗುವುದನ್ನು ನಿಷೇಧಿಸಿದೆ. ಕಿವಿ, ಬಾಯಿಯನ್ನು ಮುಚ್ಚಿಕೊಳ್ಳುವಂತೆ ಅಥವಾ ಯಾವುದೇ ರೀತಿಯ ಫಿಲ್ಟರ್ ಇರುವ ಫೇಸ್ ಮಾಸ್ಕ್ ಅನ್ನು ಧರಿಸಿ ಪರೀಕ್ಷಾ ಕೊಠಡಿಗೆ ಪ್ರವೇಶಿಸುವಂತಿಲ್ಲ. ಮೆಟಲ್ ವಾಟರ್ ಬಾಟೆಲ್ ಅಥವಾ ನಾನ್ ಟ್ರಾನ್ಸ್‌ಪರೆಂಟ್ ವಾಟರ್ ಬಾಟಲ್ ಗಳನ್ನು ಪರೀಕ್ಷಾ ಕೊಠಡಿಯೊಳಗೆ ತೆಗೆದುಕೊಂಡು ಹೋಗುವುದನ್ನು ಕಡ್ಡಾಯವಾಗಿ ನಿಷೇಧಿಸಿದೆ.

ಆಧುನಿಕ ತಂತ್ರಜ್ಞಾನದ ಬಳಸಿ ಪರೀಕ್ಷಾ ಅಕ್ರಮ ಎಸಗುವುದನ್ನು ತಡೆಯುವ ನಿಟ್ಟಿನಲ್ಲಿ ಮೆಟಲ್ ಡಿಟೆಕ್ಟರ್ ಹಾಗೂ ಎಲ್‌ಇಡಿ ಬ್ಯಾಟರಿ ಬಳಸಿ ಅಭ್ಯರ್ಥಿಗಳನ್ನು ತಪಾಸಣೆ ನಡೆಸಲಾಗುವುದು. ಪುರುಷ ಮತ್ತು ಮಹಿಳಾ ಭದ್ರತಾ ಸಿಬ್ಬಂದಿಗಳಿಂದ ಫ್ರಿಸ್ಕಿಂಗ್ ಕಾರ್ಯವನ್ನು ನೆರವೇರಿಸಲಾಗುವುದು. ಆದ್ದರಿಂದ ಅಭ್ಯರ್ಥಿಗಳು ಪರೀಕ್ಷೆ ಪ್ರಾರಂಭವಾಗುವ 02 ಗಂಟೆ ಮೊದಲು ಕಡ್ಡಾಯವಾಗಿ ಪರೀಕ್ಷಾ ಕೇಂದ್ರದಲ್ಲಿ ಹಾಜರಿರಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದ್ದಾರೆ.

ಎಚ್ಚರಿಕೆಯಿಂದ ಪರೀಕ್ಷಾ ಕಾರ್ಯ ನಿರ್ವಹಿಸಲು ನಿರ್ದೇಶನ: ಸ್ಪರ್ಧಾತ್ಮಕ ಪರೀಕ್ಷೆ ನಿರ್ವಹಣೆ ಕಾರ್ಯ ಅತಿ ಸೂಕ್ಷ್ಮವಾದದ್ದು, ಅಭ್ಯರ್ಥಿಗಳ ಭವಿಷ್ಯ ಇದರಲ್ಲಿ ಅಡಗಿದೆ. ಅಕ್ರಮಗಳಿಗೆ ಅವಕಾಶ ಮಾಡಿಕೊಡದಂತೆ ಎಚ್ಚರಿಕೆಯಿಂದ, ಪರೀಕ್ಷಾ ಕಾರ್ಯ ನಿರ್ವಹಿಸಬೇಕು. ಪ್ರಾಮಾಣಿಕ ಅಭ್ಯರ್ಥಿಗಳಿಗೆ ಅನ್ಯಾಯವಾಗಬಾರದು. ಪರೀಕ್ಷಾ ಕೇಂದ್ರಗಳಿಗೆ ಪ್ರಶ್ನೆ ಪತ್ರಿಕೆ ಹಾಗೂ ಓಎಂಆರ್ ಬಂಡಲ್‌ಗಳನ್ನು ಕೊಂಡೊಯ್ಯಲು ನೇಮಿಸಿರುವ ಮಾರ್ಗಾಧಿಕಾರಿಗಳು ಸರಿಯಾದ ಸಮಯಕ್ಕೆ ಖಜಾನೆಯಿಂದ ಪ್ರಶ್ನೆ ಪತ್ರಿಕೆಗಳನ್ನು ಪಡೆದು, ಪರೀಕ್ಷಾ ಕೇಂದ್ರಗಳಿಗೆ ತಲುಪಿಸಬೇಕು. ಪರೀಕ್ಷೆ ಮುಗಿದ ನಂತರ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಓಎಂಆರ್ ಬಂಡಲ್‌ಗಳನ್ನು ಅಂಚೆ ಮೂಲಕ ಕರ್ನಾಟಕ ಲೋಕಸೇವಾ ಆಯೋಗಕ್ಕೆ ಕಳುಹಿಸಿಕೊಡಬೇಕು. ಈ ಹಿನ್ನಲೆಯಲ್ಲಿ ಪರೀಕ್ಷಾ ಕೇಂದ್ರಗಳ ಬಳಿ ಇರುವ ಅಂಚೆ ಕಚೇರಿಗಳು ಓಎಂಆರ್ ಬಂಡಲ್‌ಗಳು ತಲುಪುವವರೆಗೂ ತಪ್ಪದೇ ಎಚ್ಚರಿಕೆಯಿಂದ ಕಾರ್ಯ ನಿರ್ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ನಿರ್ದೇಶನ ನೀಡಿದರು.

ಜಾಮರ್ ಅಳವಡಿಕೆ: ಮೊಬೈಲ್ ಬ್ಲೂಟೂತ್ ಮತ್ತು ಇತರೆ ಆಧುನಿಕ ಸಂವಹನ ಉಪಕರಣಗಳನ್ನು ಬಳಸಿ ಪರೀಕ್ಷೆಯಲ್ಲಿ ಅಕ್ರಮಗಳನ್ನು ಎಸಗುವುದನ್ನು ತಡೆಯಲು ಪರೀಕ್ಷಾ ಕೇಂದ್ರಗಳಲ್ಲಿ ಜಾಮರ್ ಅಳವಡಿಕೆ ಮಾಡಲಾಗುವುದು. ಪ್ರತಿ ಕೊಠಡಿಯಲ್ಲಿ ಸಿಸಿ ಟಿವಿ ಕ್ಯಾಮರಾ ಅಳವಡಿಸಲಾಗುವುದು. ಇದರೊಂದಿಗೆ ಫೇಸ್ ರೆಕಗ್ನೈಸೇಷನ್ ಹಾಗೂ ಬಯೋಮೆಟ್ರಿಕ್ ಹಾಜರಾತಿಯನ್ನು ಕರ್ನಾಟಕ ಲೋಕಸೇವಾ ಆಯೋಗದಿಂದ ನೇಮಕವಾದ ಸಿಬ್ಬಂದಿ ಕೈಗೊಳ್ಳುವರು. ಪರೀಕ್ಷಾ ಕೇಂದ್ರಗಳಿಗೆ ಆಗಮಿಸುವ ಅಭ್ಯರ್ಥಿಗಳನ್ನು ಪೂರ್ಣ ಪ್ರಮಾಣದಲ್ಲಿ ತಪಾಸಣೆಗೆ ಒಳಪಡಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚಿಸಿದರು.

ಪರೀಕ್ಷಾ ಕೇಂದ್ರಗಳ ಸುತ್ತ ನಿಷೇಧಾಜ್ಞೆ: ಪರೀಕ್ಷಾ ಪಾವಿತ್ರ್ಯತೆ ಕಾಪಾಡುವ ದೃಷ್ಟಿಯಿಂದ ಜ.19 ಹಾಗೂ 25 ರಂದು ಪರೀಕ್ಷೆ ನಡೆಯುವ ಕೇಂದ್ರಗಳ ಸುತ್ತಮುತ್ತಲಿನ 200 ಮೀಟರ್ ವ್ಯಾಪ್ತಿ ಪ್ರದೇಶದಲ್ಲಿ ಸೆಕ್ಷನ್ 114 ವಿಧಿಸಿ ನಿಷೇಧಾಜ್ಞೆ ಜಾರಿ ಮಾಡಿ, ಆದೇಶ ಹೊರಡಿಸಲಾಗುವುದು. ಪರೀಕ್ಷಾ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುವ ಜೆರಾಕ್ಸ್, ಕಂಪ್ಯೂಟರ್ ಹಾಗೂ ಇಂಟರ್‌ನೆಟ್ ಸೆಂಟರ್‌ಗಳನ್ನು ತೆರೆಯುವುದನ್ನು ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರಗಳಿಗೆ ಪಶ್ನೆ ಪತ್ರಿಕೆ ಹಾಗೂ ಓಎಂಆರ್ ಗಳನ್ನು ಕೊಂಡೊಯ್ಯಲು ಮಾರ್ಗಾಧಿಕಾರಿಗಳನ್ನು ನೇಮಿಸಲಾಗಿದೆ. ಪರೀಕ್ಷಾ ಕೇಂದ್ರಗಳಲ್ಲಿ ಆರೋಗ್ಯ ಇಲಾಖೆಯಿಂದ ಹೆಲ್ತ್ ಸ್ಕ್ರೀನಿಂಗ್ ಕೌಂಟರ್ ಸ್ಥಾಪಿಸುವಂತೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

21 ಪರೀಕ್ಷಾ ಕೇಂದ್ರ 7783 ಅಭ್ಯರ್ಥಿಗಳು: ಜ.19 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 11:30 ರವರೆಗೆ ಪತ್ರಿಕೆ–01 ಹಾಗೂ ಜ.25 ರಂದು ಮಧ್ಯಾಹ್ನ 03 ರಿಂದ ಸಂಜೆ 05 ರವರೆಗೆ ಪತ್ರಿಕೆ–02 ರ ಪರೀಕ್ಷೆ ನಡೆಯಲಿದೆ. ನಗರದಲ್ಲಿ 21 ಪರೀಕ್ಷಾ ಕೇಂದ್ರಗಳು ಇದ್ದು, ಒಟ್ಟು 7783 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ವಿಕಲಚೇತನ ಅಭ್ಯರ್ಥಿಗಳ ಸಹಾಯಕ್ಕಾಗಿ ಪರೀಕ್ಷಾ ಕೇಂದ್ರದಲ್ಲಿ ವ್ಹೀಲ್ ಚೇರ್ ವ್ಯವಸ್ಥೆ ಕಲ್ಪಿಸಲಾಗುವುದು. ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಹಾಗೂ ಕೊಠಡಿ ಮೇಲ್ವಿಚಾರಕರಿಗೆ ತರಬೇತಿ ನೀಡಲಾಗಿದೆ. ಜಿಲ್ಲಾ ವೀಕ್ಷಕರು, 4 ಕೇಂದ್ರಗಳಿಗೆ ಓರ್ವ ವೀಕ್ಷಕರು, ಪ್ರತಿ ಪರೀಕ್ಷ ಕೇಂದ್ರಗಳಿಗೆ ಓರ್ವ ಸ್ಥಳೀಯ ನಿರೀಕ್ಷಣಾಧಿಕಾರಿ, ಮಾರ್ಗಾಧಿಕಾರಿಗಳನ್ನು ನೇಮಿಸಲಾಗಿದೆ ಎಂದು ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ ಸಭೆಯಲ್ಲಿ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ರೇಣುಪ್ರಸಾದ್, ಜಿಲ್ಲಾ ಖಜಾನಾಧಿಕಾರಿ ರಮೇಶ್ ಅರೆ ಮಲ್ಲಾಪುರ, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ಎಬಿವಿಪಿ 44ನೇ ಪ್ರಾಂತ ಸಮ್ಮೇಳನ ಪೋಸ್ಟರ್ ಬಿಡುಗಡೆ

» ಚಿತ್ರದುರ್ಗ

ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಕರ್ನಾಟಕ ದಕ್ಷಿಣ ಪ್ರಾಂತದ 44ನೇ ಪ್ರಾಂತ ಸಮ್ಮೇಳನ 2025ನೇ ಜನವರಿ 31 ಫೆಬ್ರವರಿ 1, 2 ರಂದು ಶಿವಮೊಗ್ಗದಲ್ಲಿ ಜರುಗಲಿದ್ದು, ಇದರ ಪೋಸ್ಟರ್‌ನ್ನು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್, ಚಿತ್ರದುರ್ಗವತಿಯಿಂದ ಮಾದಾರ ಗುರುಪೀಠದ ಶ್ರೀ ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮೀಜಿ ಅವರು ಇಂದು ಮಠದ ಆವರಣದಲ್ಲಿ ಬಿಡುಗಡೆ ಮಾಡಿದರು.




ಕಳೆದ ಭಾರಿ 43ನೇ ಪ್ರಾಂತ ಸಮ್ಮೇಳನ ನವದೆಹಲಿಯಲ್ಲಿ ನಡೆದಿತ್ತು. 2016 ರಲ್ಲಿ ನಡೆದ 35ನೇ ರಾಜ್ಯ ಸಮ್ಮೇಳನದ ಉದ್ಘಾಟನೆಯನ್ನು ಶ್ರೀ ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮೀಜಿ ಅವರು ನೆರವೇರಿಸಿದ್ದರು. 44ನೇ ಪ್ರಾಂತ ಸಮ್ಮೇಳನ ಶಿವಮೊಗ್ಗದಲ್ಲಿ ನಡೆಯಲಿರುವ ಪೋಸ್ಟರ್‌ನ್ನು ಶ್ರೀ ಪರಮಪೂಜ್ಯ ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮೀಜಿ ಬಿಡುಗಡೆ ಮಾಡಿ ಕಾರ್ಯಕ್ರಮ ಯಶಸ್ವಿಯಾಗಲಿ ಎಂದು ಆರ್ಶಿವದಿಸಿದರು. ಇದೇ ಸಂದರ್ಭದಲ್ಲಿ ಚಿತ್ರದುರ್ಗ ನಗರದ ವಿವಿಧ ಕಾಲೇಜಿನಲ್ಲಿ ಪೋಸ್ಟರ್ ಬಿಡುಗಡೆ ಮಾಡಲಾಯಿತು.

ಈ ಸಂದರ್ಭದಲ್ಲಿ ಸಹ ಪ್ರಾಧ್ಯಾಪಕ ಡಾ.ಸ.ರಾ. ಲೇಪಾಕ್ಷ, ಎಬಿವಿಪಿಯ ವಿಭಾಗ ಸಹ ಸಂಚಾಲರು ಗೋಪಿ, ಚಿತ್ರದುರ್ಗ ಜಿಲ್ಲಾ ಸಂಚಾಲಕರು ಕನಕರಾಜ್ ಕೋಡಿಹಳ್ಳಿ, ನಗರ ಸಹ ಕಾರ್ಯದರ್ಶಿ ಸಂಜಯ್, ಕಾರ್ಯಕರ್ತರಾದ ತಿಪ್ಪೇಶ್, ಚರಣ್, ವಿಕಾಸ್, ಮಧು, ಮನೋಜ್, ಜೀವನ್ ಭಾಗವಹಿಸಿದ್ದರು.

## ಡಿ.ಕೆ.ಶಿವಕುಮಾರ್ ಪರ ಶಾಸಕ ಎನ್.ಎ.ಹ್ಯಾರಿಸ್ ಭರ್ಜರಿ ಬ್ಯಾಟಿಂಗ್

» ಹುಬ್ಬಳ್ಳಿ

ರಾಜ್ಯದಲ್ಲಿ ಸಿಎಂ ಕುರ್ಚಿ ವಿಚಾರದ ಜೊತೆಗೆ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ (ಏಕಅಅ) ಅಧ್ಯಕ್ಷರ ಬದಲಾವಣೆ ವಿಚಾರ ಮುಂಚೂಣಿಗೆ ಬಂದಿದೆ. ಆಕಾಂಕ್ಷಿಗಳ ಪಟ್ಟಿ ದೊಡ್ಡದಾಗುತ್ತಿದೆ. ಈ ವೇಳೆ ಹಾಲಿ ಕೆಪಿಸಿಸಿ ಅಧ್ಯಕ್ಷ ಮತ್ತು ಡಿಸಿಎಂ ಡಿಕೆ ಶಿವಕುಮಾರ್ ಅವರ ಪರವಾಗಿ ಕೆಲವು ಧ್ವನಿ ಎತ್ತಿದ್ದಾರೆ. ಅವರ ಮುಂದುವರಿಯಲಿದ್ದಾರೆ ಎಂದು ಹೇಳುವ ಮೂಲಕ ಶಾಂತಿನಗರ ಶಾಸಕ ಎನ್.ಎ.ಹ್ಯಾರಿಸ್ ಅವರು ಡಿಸಿಎಂ ಪರ ಬ್ಯಾಟ್ ಬೀಸಿದ್ದಾರೆ.

ಹುಬ್ಬಳ್ಳಿಯಲ್ಲಿ ಗುರುವಾರ ಸುದ್ದಿಗಾರರ ಜೊತೆಗೆ ಮಾತನಾಡಿದ ಅವರು, ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಆಗಬೇಕು ಎಂಬ ಸಚಿವ ಸತೀಶ್ ಜಾರಕಿಹೊಳಿ ಹೇಳಿಕೆ ವಿಚಾರ ಈಗ ಮುನ್ನಲೆ ಬರುತ್ತಿದೆ. ಆದರೆ ಕೆಪಿಸಿಸಿ ಅಧ್ಯಕ್ಷ ಬದಲಾವಣೆ ವಿಚಾರದಲ್ಲಿ ಯಾವುದೇ ಗೊಂದಲ ಇಟ್ಟುಕೊಳ್ಳಬೇಡಿ ಎಂದು ಅವರು ತಿಳಿಸಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅತ್ಯುತ್ತಮವಾಗಿ ಕೆಲಸ ಮಾಡುತ್ತಿದ್ದಾರೆ. ಅವರು ಮಾಡಿದಷ್ಟು ಒಳ್ಳೆಯ ಕೆಲಸ ಯಾರು ಮಾಡಿಲ್ಲ.

ಪುಟ 2

## ಪ್ರಮುಖ ಸುದ್ದಿ

### ಟಿಬಿ ನಿಯಂತ್ರಣ ಅಭಿಯಾನದಲ್ಲಿ ಟಿಹೆಚ್‌ಇಒ ಎನ್.ಎಸ್.ಮಂಜುನಾಥ್ ಸಲಹೆ

# ದುಶ್ಚಟಗಳಿಂದ ದೂರವಿರಿ: ಕ್ಷಯಮುಕ್ತ ಭಾರತ ನಿರ್ಮಿಸಿ

» ಚಿತ್ರದುರ್ಗ

ದುಶ್ಚಟಗಳಿಂದ ದೂರವಿದ್ದು, ಆದರ್ಶ ಬದುಕು ಕಟ್ಟಿಕೊಳ್ಳುವ ಮೂಲಕ ಕ್ಷಯ ಮುಕ್ತ ಭಾರತ ನಿರ್ಮಿಸಿ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಹೇಳಿದರು.

ನಗರದ ಡಾನ್ ಬಾಸ್ಕೋ ಪ್ರೌಢಶಾಲೆಯಲ್ಲಿ ಗುರುವಾರ 100 ದಿನಗಳ ಟಿಬಿ ನಿಯಂತ್ರಣ ಅಭಿಯಾನ ಕಾರ್ಯಕ್ರಮದಲ್ಲಿ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಟಿಬಿ ನಿಯಂತ್ರಣದಲ್ಲಿ ವಿದ್ಯಾರ್ಥಿಗಳ ಪಾತ್ರ ಕುರಿತು ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಕ್ಷಯ ರೋಗವು ಸೂಕ್ಷ್ಮಾಣು ಜೀವಿ ಟ್ಯೂಬರ್ ಕ್ಲೋಸಿಸ್‌ನಿಂದ ಸೋಂಕು ತಗಲುತ್ತದೆ. ಕ್ಷಯ ರೋಗಿಯು ಕೆಮ್ಮಿದಾಗ ಸೀನಿದಾಗ ತುಂತುರು ಹನಿಗಳ ಮೂಲಕ ಕ್ಷಯರೋಗದ ಕ್ರಿಮಿ ವಾತಾವರಣ ಸೇರುತ್ತದೆ. ಉಸಿರಾಟದ ಮೂಲಕ ದೇಹ ಪ್ರವೇಶಿಸುತ್ತದೆ. ಕೆಮ್ಮುವಾಗ ಸೀನುವಾಗ ಕರವಸ್ತ್ರ ಬಳಸುವ ಶಿಸ್ತು ಪಾಲಿಸಿ, ನಿತ್ಯವೂ ವ್ಯಾಯಾಮ, ವೈಯಕ್ತಿಕ ಸ್ವಚ್ಛತೆ, ಪೌಷ್ಟಿಕ ಆಹಾರ ಸೇವಿಸಿ ಟಿಬಿ ರೋಗ ಬಾರದಂತೆ ನಿಮ್ಮನ್ನು ನೀವು ರಕ್ಷಿಸಿಕೊಳ್ಳಿ ಎಂದು ಸಲಹೆ ನೀಡಿದರು. ಟಿಬಿ ರೋಗವು ಒಂದು ಮರಣಾಂತಿಕ ಕಾಯಿಲೆಯಾಗಿದ್ದು, ಭಾರತದ ಸಾರ್ವಜನಿಕ ಆರೋಗ್ಯ ಸಮಸ್ಯೆಗಳಲ್ಲಿ ಒಂದಾಗಿದೆ. ಈ ನೂರು ದಿನಗಳ ಅಭಿಯಾನದಲ್ಲಿ ಸಾರ್ವಜನಿಕರಿಗೆ ವಿವಿಧ ವರ್ಗಗಳ ಸಮುದಾಯಕ್ಕೆ ಟಿಬಿ ರೋಗ ಹೇಗೆ ಬರುತ್ತದೆ, ಹೇಗೆ ಹರಡುತ್ತದೆ, ಯಾವ ಚಿಕಿತ್ಸೆ ನೀಡಬೇಕು ಎಂಬುದರ ಬಗ್ಗೆ ಮಾಹಿತಿ ಶಿಕ್ಷಣ ಒದಗಿಸುವುದು. ವಿದ್ಯಾರ್ಥಿ ದಿಸೆಯಲ್ಲಿ ತಾವುಗಳು ನಿರ್ವಹಿಸಬೇಕಾದ ಜವಾಬ್ದಾರಿ ನಿಮ್ಮ ಮನೆಯ ಕುಟುಂಬದ ಸದಸ್ಯರಿಗೆ ಕೆಮ್ಮುವಾಗ ಸೀನುವಾಗ ನಿರ್ವಹಿಸಬೇಕಾದ ಶಿಷ್ಟಾಚಾರ ಹೇಳಿಕೊಡಬೇಕು. ಸಮುದಾಯದಲ್ಲಿ ಆಗಾಗ ಅವಕಾಶ ಸಿಕ್ಕಾಗ ಇದರ ಬಗ್ಗೆ ಮಾತನಾಡಬೇಕು. ಸಾಮಾಜಿಕ ಕಳಂಕವನ್ನು ಹೋಗಲಾಡಿಸಿ ಉಚಿತ ಚಿಕಿತ್ಸೆಯ ಮಾಹಿತಿ ತಪಾಸಣೆಯ ಮಾಹಿತಿ ನೀಡಬೇಕು ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧಿಸಲು ಧ್ವನಿ ಎತ್ತಬೇಕು. ಎಲ್ಲೆಂದರಲ್ಲಿ ಉಗುಳುವುದನ್ನು ನಿಲ್ಲಿಸಬೇಕು ಎಂದು ಹೇಳಿದರು.

ಪುಟ 2

# ರಾಜ್ಯ ಸರ್ಕಾರದಿಂದ ಅಲೆಮಾರಿಗಳಿಗೆ ಅನ್ಯಾಯ

» **ಚಿತ್ರದುರ್ಗ**

ರಾಜಕೀಯ ಪಕ್ಷಗಳು ನಮ್ಮ ಸಮುದಾಯವನ್ನು ಪರಿಗಣಿಸಿಲ್ಲ. ಸಣ್ಣ ಸಮುದಾಯವಾದ ನಮ್ಮನ್ನು ನಿರ್ಲಕ್ಷ್ಯ ಮಾಡಿದೆ. ಇದರಿಂದಾಗಿ ನಾವು ಇಂದಿಗೂ ಎಲ್ಲರಿಂದಲೂ ಸಹಾ ನಿರ್ಲಕ್ಷಕ್ಕೆ ಒಳಗಾಗಿದ್ದೇವೆ ಎಂದು ರಾಜ್ಯ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗಗಳ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಪ್ರತಾಪ್ ಕುಮಾರ್ ಓ.ಜೋಗಿ ದೂರಿದ್ದಾರೆ.



ನಗರದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ರಾಜಕೀಯ ಪಕ್ಷಗಳು ಹಾಗೂ ನಮ್ಮನ್ನಾಳುವ ಸರ್ಕಾರಗಳು ನಮ್ಮ ಸಮುದಾಯಕ್ಕೆ ನ್ಯಾಯವನ್ನು ನೀಡುವಲ್ಲಿ ವಿಫಲವಾಗಿದೆ. ನಮ್ಮ ಸಮುದಾಯದವರು ಇನ್ನೂ ಸಹಾ ಚಿಂದಿಯನ್ನು ಆಯುವ ಕೆಲಸವನ್ನು ಮಾಡುತ್ತಲೇ ಶಿಕ್ಷಣ ಇಲ್ಲದೆ ಒಂದು ಕಡೆಯಿಂದ ಮತ್ತೊಂದು ಕಡೆಗೆ ಅಲೆದಾಡುತ್ತಾ ಜೀವನ ನಡೆಸುತ್ತಿದ್ದಾರೆ. ಸರ್ಕಾರಗಳಾಗಲಿ, ರಾಜಕೀಯ ಪಕ್ಷಗಳಾಗಲಿ ನಮ್ಮನ್ನು ಸರಿಯಾದ ರೀತಿಯಲ್ಲಿಪರಿಗಣಿಸಿಲ್ಲ,ಸಣ್ಣಸಮುದಾಯ ಎಂದು ನಿರ್ಲಕ್ಷ್ಯ ಮಾಡುತ್ತಿವೆ. ನಮ್ಮ ಜನಾಂಗದವರಿಗೆ ನಿಲ್ಲಲು ಒಂದು ನೆಲಯಲ್ಲಿ ಇದುವರೆವಿಗೂ ನೀಡಲ್ಲ, ಇದರಿಂದಾಗಿ ನಮ್ಮ ಸಮುದಾಯಕ್ಕೆ ಶಿಕ್ಷಣ ಎನ್ನವುದು ಮರಿಚಿಕೆಯಾಗುತ್ತಿದೆ ಎಂದು ನುಡಿದರು.

ಅಲೆಮಾರಿ ಮತ್ತು ಅರೆ ಅಲೆಮಾರಿಯಲ್ಲಿ 46 ಜಾತಿಗಳು ಬರಲಿದ್ದು, ಇದರಲ್ಲಿ ಬಹಳಷ್ಟು ಜನಾಂಗದವರು ನಮ್ಮ ಕುಲದ ವೃತ್ತಿಯನ್ನು ಮುಂದುವರೆಸಿಕೊಂಡು ಬರುತ್ತಿದ್ದಾರೆ ಸಮಾಜದ ಮುಖ್ಯವಾಹಿನಿಗೆ ಬಂದಿಲ್ಲ, ಜನಾಂಗದವರಿಗೆ ಮೂಲಭೂತ ಸೌಕರ್ಯವಾದ ವಸತಿ, ಶಿಕ್ಷಣ, ಸಮುದಾಯ ಭವನ ನಿರ್ಮಾಣ, ರುದ್ರಭೂಮಿ, ಸಿಕ್ಕಿಲ್ಲ, ಒಂದು ಜಾಗದಲ್ಲಿ 10 ವರ್ಷ ಟೆಂಟ್ ಹಾಕಿ ವಾಸವಾಗಿದ್ದವರಿಗೆ ಆ ಜಾಗವನ್ನು ನೀಡುವಂತೆ ಸರ್ಕಾರಕ್ಕೆ ಮನವಿ ಮಾಡಲಾಗಿದೆ. ಇದ್ದಲ್ಲದೆ ನಮಗೆ ಆಲೆಮಾರಿ ಎಂದು ಜಾತಿ ಪ್ರಮಾಣ ಪತ್ರವನ್ನು ನೀಡುವಲ್ಲಿಯೂ ಸಹಾ ತಹಶೀಲ್ದಾರ್ ರವರು ಕಡೆಗಣಿಸುತ್ತಿದ್ದಾರೆ ಎಂದು ತಿಳಿಸಿದರು.

ರಾಷ್ಟ್ರೀಯ ಪಕ್ಷಗಳಾದ ಕಾಂಗ್ರೆಸ್ ಮತ್ತು ಬಿಜೆಪಿ ಸಹಾ ನಮ್ಮನ್ನು ನಿರ್ಲಕ್ಷ ಮಾಡಿವೆ. ಸರ್ಕಾರ ಬೇರೆ ಎಲ್ಲಾ ನಿಗಮಗಳಿಗೆ ಅಧ್ಯಕ್ಷರನ್ನು ನೇಮಕ ಮಾಡಿ ಅನುದಾನವನ್ನುನೀಡೆ ಆದರೆ ನಮಗೆ ನಿಗಮವನ್ನು ಸ್ಥಾಪನೆ ಮಾಡಲಾಗಿದೆ ಆದರೆ ಅದಕ್ಕೆ ಅಗತ್ಯವಾಗಿ ಬೇಕಾದ ಅಧ್ಯಕ್ಷರು ಹಾಗೂ ಸದಸ್ಯರನ್ನು ನೇಮಕ ಮಾಡಿಲ್ಲ ಅನುದಾನವನ್ನು ಸಹಾ ನೀಡಲ್ಲ ಎಂದು ಸಕಾರದ ವಿರುದ್ದ ವಾಗ್ದಾಳಿ ನಡೆಸಿದ ಅವರು ರಾಜ್ಯ ಮುಖ್ಯಮಂತ್ರಿಗಳು ಸಹಾ ನಮ್ಮ ಸಮುದಾಯವನ್ನು ನಿರ್ಲಕ್ಷ್ಯ ಮಾಡಿದೆ ನಮ್ಮ ಸಮುದಾಯದ ಸಮಸ್ಯೆಗಳನ್ನು ಬಗೆಹರಿಸುವಲ್ಲಿ ಸರ್ಕಾರ ಮುಂದಾಗಿಲ್ಲ ನಮ್ಮ ಸಮುದಾಯ ಸಮಾವೇಶಕ್ಕೆ ಹಿಂದಿನ ಹಾಗೂ ಇಂದಿನ ಮುಖ್ಯಮಂತ್ರಿಗಳನ್ನು ಆಹ್ವಾನ ಮಾಡಿದ್ದರು ಸಹಾ ಬಂದಿಲ್ಲ ಎಂದು ನುಡಿದರು.

ಅಲೆಮಾರಿ ಮತ್ತು ಅರೆ ಅಲೆಮಾರಿ ಜಿಲ್ಲಾಧ್ಯಕ್ಷರಾದ ಲಕ್ಷ್ಮೀಕಾಂತ ಯಾದವ್ ಮಾತನಾಡಿ, ಹೊಳಲ್ಕೆರೆ ತಾಲ್ಲೂಕಿನಲ್ಲಿ ಅಲೆಮಾರಿ ಜನಾಂಗದವರಿಗಾಇಯೇ ವಸತಿ ಶಾಲೆ ಇದೆ ಇದರಲ್ಲ ನಮ್ಮ ಸಮುದಾಯ ಮಕ್ಕಳು ಅಭ್ಯಾಸವನ್ನು ಮಾಡುತ್ತಿದ್ದಾರೆ ಇದೆ ಇಲ್ಲಿ ಸರಿಯಾದ ರೀತಿಯಲ್ಲಿ ಮೂಲಭೂತ ಸೌಕರ್ಯ ಇಲ್ಲ, ಮಕ್ಕಳು ಮಲಗಲು ಹಾಸಿಗೆ ಇಲ್ಲ, ಸ್ನಾನ ಮಾಡಲು ಬಿಸಿಯಾದ ನೀರಿಲ್ಲ, ತಣ್ಣನೆ ನೀರಿನಲ್ಲಿಯೇ ಸ್ನಾನ ಮಾಡುತ್ತಾರೆ ನೆಲದ ಮೇಲೆ ಮಲಗುವ ಪರಿಸ್ಥಿತಿ ಇದೆ ಇದರ ಬಗ್ಗೆ ಯಾವ ಅಧಿಕಾರಿಯಾಗಲಿ, ಚುನಾಯಿತ ಪ್ರತಿನಿಧಿಗಳು ಗಮನ ನೀಡುತ್ತಿಲ್ಲ ಎಂದು ಆರೋಪಿಸಿದರು.

ಗೋಷ್ಟಿಯಲ್ಲಿ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗಗಳ ಒಕ್ಕೂಟದ ಗೌರವಾಧ್ಯಕ್ಷರಾದ ರಾಮು ಗೋಸಾಯಿ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ರವಿದಾಸರ್, ರಾಜು ಉಪಾಧ್ಯಕ್ಷರಾದ ಜ್ಯೋತಿ ದಾಸರ್, ಅಭೀಷೇಕ್, ಹೇಮಣ್ಣ, ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ದುಶ್ಚಟಗಳಿಂದ ದೂರವಿರಿ: ಕ್ಷಯಮುಕ್ತ ಭಾರತ ನಿರ್ಮಿಸಿ

» ಮೊದಲ ಪುಟದಿಂದ

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣನಾಯಕ್ ಮಾತನಾಡಿ, ಹೊಸ ಕ್ಷಯರೋಗ ಪ್ರಕರಣ ಕಡಿಮೆ ಮಾಡಿ ಇರುವ ರೋಗಿಗಳ ಮರಣ ಪ್ರಮಾಣ ಕಡಿಮೆ ಮಾಡುವುದು. ಇದು ನಮ್ಮೆದುರಿಗೆ ಇರುವ ಸವಾಲು ಎಲ್ಲರೂ ಒಟ್ಟಾಗಿ ಸವಾಲು ಎದುರಿಸೋಣ ಎಂದರು. ಕಾರ್ಯಕ್ರಮದಲ್ಲಿ ಬುದ್ಧ ನಗರದ ನಗರ ಆರೋಗ್ಯ ಕೇಂದ್ರದ ಡಾ.ಸುರೇಂದ್ರ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶ್ರೀನಿವಾಸ್, ಕ್ಷಯರೋಗ ವಿಭಾಗದ ಮೇಲ್ವಿಚಾರಣಾ ಅಧಿಕಾರಿಗಳಾದ ನಾಗರಾಜ್, ಸಂತೋಷ್, ಲೋಕೇಶ್, ಡಾನ್ ಬಾಸ್ಕೋ ವಿದ್ಯಾ ಸಂಸ್ಥೆಯ ಕೋ ಆರ್ಡಿನೇಟರ್ ಮಂಜುನಾಥ್, ಶಾಲಾ ಶಿಕ್ಷಕಿ ಅನಿತಾ, ಬುದ್ದ ನಗರದ ನಿಂಗೇಶ್, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ರಾಜ್ಯ ಸರ್ಕಾರದಿಂದ 'ಅನುಕಂಪದ ಆಧಾರದ ನೇಮಕಾತಿ' ಕುರಿತು ಮಹತ್ವದ ಆದೇಶ

» ಮೊದಲ ಪುಟದಿಂದ

ಕರ್ನಾಟಕ ಸಿವಿಲ್ ಸೇವಾ (ಅನುಕಂಪದ ಆಧಾರದ ಮೇಲೆ ನೇಮಕಾತಿ) ನಿಯಮಗಳು 1996 ರ ನಿಯಮ 4(4) ರನ್ವಯ ಅಭ್ಯರ್ಥಿಯ ವಿದ್ಯಾರ್ಹತೆಗನುಗುಣವಾಗಿ ಕರ್ನಾಟಕ ಸರ್ಕಾರ ಸಚಿವಾಲಯದ ಸಹಾಯಕ ಹುದ್ದೆಯ ವೇತನ ಶ್ರೇಣಿಯನ್ನು ಮೀರದಂತಹ ಗರಿಷ್ಠ ಗ್ರೂಪ್ "ಸಿ" ಹುದ್ದೆ ಅಥವಾ ಗ್ರೂಪ್ "ಡಿ" ಹುದ್ದೆಯನ್ನು ನೀಡಬಹುದಾಗಿದೆ. ಅನುಕಂಪದ ಆಧಾರದ ಮೇಲಿನ ನೇಮಕಾತಿ ಅರ್ಜಿಯನ್ನು ಸಲ್ಲಿಸಿದಾಗ ಯಾವ ನಿಯಮ ಚಾಲ್ತಿಯಲ್ಲಿರುತ್ತದೆಯೋ ಆ ಪ್ರಕಾರವಾಗಿ ನಿರ್ಧರಿಸಬೇಕಿರುತ್ತದೆ ಹಾಗೂ ಅನುಕಂಪದ ಆಧಾರದ ನೇಮಕಾತಿಗಾಗಿ ಅರ್ಜಿ ಸಲ್ಲಿಸಲುನಿಗದಿಪಡಿಸಿರುವ ಕಾಲಮಿತಿಯೊಳಗೆ ಅಭ್ಯರ್ಥಿಯು ಹೊಂದಿರುವ ವಿದ್ಯಾರ್ಹತೆಯನ್ನು ಪರಿಗಣಿಸಿ ನೇಮಕಾತಿ ನೀಡಬೇಕಾಗುತ್ತದೆ ಎಂದು ಹೇಳಿದೆ. ಆದರೆ, ಕೆಲವು ಇಲಾಖೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳಿಗೆ ಅನುಕಂಪದ ಆಧಾರದ ನೇಮಕಾತಿ ನೀಡುವ ಸಂದರ್ಭದಲ್ಲಿ ಅವರುಗಳ ವಿದ್ಯಾರ್ಹತೆಯನ್ನು ಪರಿಗಣಿಸದೇ ಕೆಳಹಂತದ ಹುದ್ದೆಗಳಿಗೆ ನೇಮಕಾತಿ ಮಾಡಿರುವ ಬಗ್ಗೆ ದೂರುಗಳು ಸ್ವೀಕೃತವಾಗಿರುತ್ತವೆ. ಈ ನಡೆಯನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿರುತ್ತದೆ ಎಂದಿದೆ. ಅನುಕಂಪದ ಆಧಾರದ ಮೇಲಿನ ನೇಮಕಾತಿಗೆ ಅರ್ಜಿಯನ್ನು ಸಲ್ಲಿಸಿದಾಗ ಯಾವ ನಿಯಮ ಚಾಲ್ತಿಯಲ್ಲಿರುತ್ತದೆಯೋ ಆ ಪ್ರಕಾರವಾಗಿ ಹಾಗೂ ಅನುಕಂಪದ ಆಧಾರದ ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕಾಲಮಿತಿಯೊಳಗೆ ಅಭ್ಯರ್ಥಿಯು ಹೊಂದಿರುವ ವಿದ್ಯಾರ್ಹತೆಯನ್ನು ಪರಿಗಣಿಸಿ ನೇಮಕಾತಿ ನೀಡಬೇಕಾಗುತ್ತದೆ. ಇದರಿಂದಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸೇರಿದಂತೆ ಇತರೆ ಜಾತಿ/ಧರ್ಮ/ವರ್ಗದ ಆಧಾರದ ಮೇಲೆ ಅಭ್ಯರ್ಥಿಗಳಿಗೆ ಅನುಕಂಪದ ಆಧಾರದ ನೇಮಕಾತಿ ನೀಡುವ ಸಂದರ್ಭದಲ್ಲಿ ಯಾವುದೇ ತಾರತಮ್ಯ ಮಾಡದಂತೆ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸುವಂತೆ ಹಾಗೂ ಈ ರೀತಿ ನಿಯಮಾನುಸಾರ ಕ್ರಮವಹಿಸದ ಅಧಿಕಾರಿ / ಸಿಬ್ಬಂದಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸುವಂತೆ ಎಲ್ಲಾ ಸಕ್ಷಮ / ನೇಮಕಾತಿ ಪ್ರಾಧಿಕಾರಗಳಿಗೆ ಈ ಮೂಲಕ ಕಟ್ಟುನಿಟ್ಟಾಗಿ ಸೂಚಿಸಿದ್ದಾರೆ.

### ಕ್ರೀಡಾ ಶಾಲೆ, ನಿಲಯಗಳಿಗೆ ಆಯ್ಕೆ

■ **ದಾವಣಗೆರೆ**

ಪ್ರಸಕ್ತ ಸಾಲಿನಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ರಾಜ್ಯದ ವಿವಿಧ ಸ್ಥಳಗಳಲ್ಲಿ ನಡೆಸುತ್ತಿರುವ ಕ್ರೀಡಾಶಾಲೆ ಹಾಗೂ ಕ್ರೀಡಾ ನಿಲಯಗಳಿಗೆ ಪ್ರತಿಭಾವಂತ ಕ್ರೀಡಾಪಟುಗಳನ್ನು ಗುರುತಿಸಿ, ವಿವಿಧ ಹಂತಗಳಲ್ಲಿ ಆಯ್ಕೆಯನ್ನು ನಡೆಸಿ, ಕ್ರೀಡಾಶಾಲೆ ನಿಲಯಗಳಿಗೆ ಆಯ್ಕೆ ಪ್ರಕ್ರಿಯೆ ನಡೆಸಲಾಗುತ್ತಿದೆ. ಆಯ್ಕೆ ನಡೆಯುವ ಸ್ಥಳ ಮತ್ತು ದಿನಾಂಕ: ಜ.27 ರಂದು ತಾಲ್ಲೂಕು ಕ್ರೀಡಾಂಗಣ, ಹರಿಹರ ಮೊ.ಸಂ: 94486 67255, ಜ.28 ರಂದು ತಾಲ್ಲೂಕು ಕ್ರೀಡಾಂಗಣ, ಹೊನ್ನಾಳಿ, ಮೊ.ಸಂ: 78926 41492, ಮತ್ತು ಸರ್ಕಾರಿ ಪದವಿ ಪೂರ್ವಕಾಲೇಜು ಮೈದಾನ, ನ್ಯಾಮತಿ ಮೊ.ಸಂ: 9480796263, ಜ.29 ರಂದು ತಾಲ್ಲೂಕು ಕ್ರೀಡಾಂಗಣ, ಚನ್ನಗಿರಿ ಮೊ.ಸಂ: 9480796263, ಜ.29 ರಂದು ಬೇಡರ ಕಣ್ಣಪ್ಪ ಪ್ರೌಢಶಾಲಾ ಮೈದಾನ, ಜಗಳೂರು, ಮೊ.ಸಂ: 9972464313, ಜ.31 ರಂದು ಜಿಲ್ಲಾ ಮಟ್ಟದ ಆಯ್ಕೆ ದಾವಣಗೆರೆ ಜಿಲ್ಲಾ ಕ್ರೀಡಾಂಗಣ, ಹಾಗೂ ಜಿಲ್ಲಾ ಕ್ರೀಡಾ ವಸತಿ ಶಾಲೆಗೆ ಪ್ರವೇಶ ಪಡೆಯಲಿಚ್ಚಿಸುವ ಕುಸ್ತಿ ಮತ್ತು ಖೋ-ಖೋ 11 ವರ್ಷದೊಳಗಿನ ಬಾಲಕರ ಆಯ್ಕೆ ಪ್ರಕ್ರಿಯೆ ನಡೆಸಲಾಗುವುದು. ಮೊ.ಸಂ: 9448667255, 9480796263, 9972464313, 9141091590 ಹೆಚ್ಚಿನ ವಿವರಗಳಿಗೆ ಸಂಬಂಧಪಟ್ಟ ತಾಲ್ಲೂಕಿನ ಅಧಿಕಾರಿಗಳ ಮೊಬೈಲ್ ಸಂಖ್ಯೆಯನ್ನು ಅಥವಾ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ದಾವಣಗೆರೆ ಕಚೇರಿ ದೂ.ಸಂ: 08192-237480 ಸಂಪರ್ಕಿಸಲು ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗಣರಾಜ್ಯೋತ್ಸವದ ಪ್ರಯುಕ್ತ ಮಹರ್ಷಿ ವಾಲ್ಮೀಕಿ ವಿಷಯಾಧಾರಿತ 217ನೇ ಫಲ ಪುಷ್ಪ ಪ್ರದರ್ಶನವನ್ನು ಲಾಲ್ ಬಾಗ್ ನಲ್ಲಿ ಉದ್ಘಾಟಿಸಿದರು. ವಾಲ್ಮೀಕಿ ಗುರುಪೀಠದ ಸ್ವಾಮೀಜಿಗಳು, ತೋಟಗಾರಿಕಾ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್, ವಸತಿ ಸಚಿವ ಜಮೀರ್ ಅಹಮದ್, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಉಪಸ್ಥಿತರಿದ್ದರು.

### ಡಿ.ಕೆ.ಶಿವಕುಮಾರ್ ಪರ ಶಾಸಕ ಹ್ಯಾರಿಸ್ ಭರ್ಜರಿ ಬ್ಯಾಟಿಂಗ್

» ಮೊದಲ ಪುಟದಿಂದ

ಪಕ್ಷದ ಸಂಘಟನೆ ಮಾಡಿದ್ದಾರೆ, ತಳಮಟ್ಟದಿಂದ ಪಕ್ಷ ಸಂಘಟನೆ ಮಾಡುವಲ್ಲಿ ಅವರು ಹೆಚ್ಚು ಶ್ರಮಿಸಿದ್ದಾರೆ. ಕಳೆದ ಚುನಾವಣೆಯಲ್ಲಿ ಹೆಚ್ಚು ಒಳ್ಳೆಯ ಕೆಲಸ ಮಾಡಿದ್ದಾರೆ. ಈಗಿನ ಸಮಯದಲ್ಲಿ ಡಿ.ಕೆ ಶಿವಕುಮಾರ್ ಅವರೇ ಅಧ್ಯಕ್ಷರಾಗಿ ಮುಂದುವರಿಯಬೇಕು ಅಭಿಪ್ರಾಯ ಹೊರ ಹಾಕಿದರು.ಇನ್ನೂ ಕೆಲವು ದಿನಗಳ ಕಾಲ ಡಿ.ಕೆ.ಶಿವಕುಮಾರ್ ಅಧ್ಯಕ್ಷರಾಗಿ ಮುಂದುವರಿಯಬೇಕು. ಸದ್ಯ ಈಗ ಸತೀಶ್ ಜಾರಕಿಹೊಳಿ ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ಆಕಾಂಕ್ಷಿ ಆಗುವುದರಲ್ಲಿ ತಪ್ಪೇನಿಲ್ಲ. ಕಾಂಗ್ರೆಸ್ ಪಕ್ಷದಲ್ಲಿ ಶಿಸ್ತು ಬಹಳ ಮುಖ್ಯ. ಪಕ್ಷ ಯಾವ ರೀತಿ ಹೇಳುತ್ತದೆ ಅದನ್ನು ಎಲ್ಲರೂ ಪಾಲಿಸಬೇಕು ಪಕ್ಷದ ಹಿರಿಯ ವರಿಷ್ಠರ ತೀರ್ಮಾನವೇ ಅಂತಿಮ ಎಂದು ಹೇಳಿದರು.

**ಸಿಎಂ-ಡಿಸಿಎಂ ಸಂಬಂಧ ಹೇಗಿದೆ?:** ದೆಹಲಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯಾ ಹಾಗೂ ಡಿಸಿಎಂ ಶಿವಕುಮಾರ್ ಮುಖಾಮುಖಿ ಆಗದ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಇದೊಂದು ಸಣ್ಣದಾದ ಮಿಸ್ ಕಮ್ಯೂಕೇಷನ್ ಆಗಿದೆ. ಈ ಉಭಯ ನಾಯಕರು ಹೆಚ್ಚು ಆಪ್ತರಾಗಿದ್ದಾರೆ. ಒಂದೇ ಪ್ಲೈಟ್ ನಲ್ಲಿದಲ್ಲಿಯೇ ಓಡಾಡುತ್ತಾರೆ. ಅವರಿಬ್ಬರ ಸಂಬಂಧ ಉತ್ತಮವಾಗಿದೆ. ಸ್ವತ ಡಿ.ಕೆ.ಶಿವಕುಮಾರ್ ಹೇಳಿದ್ದು ಸಿದ್ದರಾಮಯ್ಯನವರೇ ಮುಖ್ಯಮಂತ್ರಿ ಆಗಿರುತ್ತಾರೆ. ಸಿದ್ದರಾಮಯ್ಯಾನವರೇ ಸಿಎಂ ಆಗಿ ಮುಂದುವರಿತ್ತಾರೆ ಎಂದು ಹೇಳಿದ್ದಾರೆ. ಕೆಪಿಸಿಸಿ ಅಧ್ಯಕ್ಷರಾಗಿ ಡಿ.ಕೆ ಶಿವಕುಮಾರ್ ಇರುತ್ತಾರೆ ಎಂದು ಮುಖ್ಯಮಂತ್ರಿಗಳು ತಿಳಿಸಿದ್ದಾರೆ. ಅಲ್ಲದೇ ಕಾಂಗ್ರೆಸ್ ಸಿಎಲ್ ಪಿ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆ ಬಗ್ಗೆ ಮಾತನಾಡಿದ್ದಾರೆ. ಇಬ್ಬರಿಗೂ ಎಷ್ಟು ಕ್ಲೋಸ್ ಎಂಬುದು ನನಗೂ ಗೊತ್ತಿದೆ ಎಂದರು.

**ಅಧಿಕಾರಹಂಚಿಕೆಬಗ್ಗೆಹೇಳಿದ್ದೇನು?:**ಯಾವುದೇಊಹಾಪೋಹಗಳಿಗೆ ಅವಕಾಶ ಕೊಡಬೇಡಿ ಎಂದು ಮೊನ್ನೆಯ ಸಭೆಯಲ್ಲಿ ತಿಳಿಸಲಾಗಿದೆ. ಮುಖ್ಯಮಂತ್ರಿ ಸ್ಥಾನದ ಬಗ್ಗೆ ಪ್ರತಿಕ್ರಿಯಿಸಿದ ಅವರು, ಅಧಿಕಾರ ಹಂಚಿಕೆ ಬಗ್ಗೆ ಬಹಿರಂಗವಾಗಿ ಹೇಳಿಕೆ ನೀಡದಂತೆ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲ ಅವರು ತಿಳಿಸಿದ್ದಾರೆ. ಇದೊಂದು ಪಕ್ಷದ ಶಿಸ್ತಿನ ವಿಚಾರವಾಗಿ ಮಾತನಾಡಿದ ಅವರು, ಯಾರು ಪಕ್ಷದ ವಿರುದ್ಧ ಮಾತನಾಡಬಾರದು. ಪಕ್ಷದ ಆಂತರಿಕ ವಿಚಾರವಾಗಿ ಸಾಕಷ್ಟು ಅನಗತ್ಯವಾದ ಗೊಂದಲ ಬೇಡ ನಮ್ಮ ಸಿದ್ಧಾಂತ, ತೀರ್ಮಾನ ವಿರುದ್ಧ ಯಾರು ಮಾತನಾಡಬಾರದು ಎಂದು ತಿಳಿಸಿದ್ದಾರೆ ಎಂದರು.

### ದಿಶಾ ಸಮಿತಿ ಸಭೆ.

**ವಿಜಯನಗರ:** ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದಿಶಾ) ಸಭೆಯನ್ನು ಜ.20 ರಂದು ಹಗರಿಬೊಮ್ಮನಹಳ್ಳಿ ತಾಲೂಕು ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

### ಮೆಸ್ಕಾಂ ಜನ ಸಂಪರ್ಕ ಸಭೆ

**ಶಿವಮೊಗ್ಗ:** ತೀರ್ಥಹಳ್ಳಿ ಮೆಸ್ಕಾಂ ಉಪವಿಭಾಗ ಕಛೇರಿಯಲ್ಲಿ ಜ. 20 ರಂದು ಬೆಳಿಗ್ಗೆ 11.00 ರಿಂದ 01.00 ರವರೆಗೆ ಜನಸಂಪರ್ಕ ಸಭೆ ನಡೆಯಲಿದೆ. ಈ ಸಭೆಯಲ್ಲಿ ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲ್ಲಿದ್ದು, ಸಂಬಂಧ ಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.

## ಪ್ರಮುಖ ಸುದ್ದಿ

# ಅಲೆಮಾರಿ ಜನಾಂಗದ ರಾಜ್ಯ ಮಟ್ಟದ ಸಾಂಸ್ಕೃತಿಕ ಕಲೋತ್ಸವ

» **ಚಿತ್ರದುರ್ಗ**

ಕರ್ನಾಟಕ ರಾಜ್ಯ ಅಲೆಮಾರಿ ಮತ್ತು ಆರೆ ಅಲೆಮಾರಿ ಜನಾಂಗಗಳ ಒಕ್ಕೂಟ (ರಿ.) ಬೆಂಗಳೂರು ಇದರ ವತಿಯಿಂದ ತಾ-19-1-2025 ಭಾನುವಾರ ದಾವಣಗೆರೆ ವಿದ್ಯಾನಗರದ ಕುವೆಂಪು ಕನ್ನಡ ಭವನದಲ್ಲಿ ಕರ್ನಾಟಕ ರಾಜ್ಯ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದ ರಾಜ್ಯ ಮಟ್ಟದ ಸಾಹಿತ್ಯ ಸಾಂಸ್ಕೃತಿಕ ಕಲೋತ್ಸವ, ಪ್ರತಿಭಾ ಪುರಸ್ಕಾರ, ಸಂತ ಸಂದೇಶ, ವಿಚಾರ ಗೋಷ್ಟಿ ಸಾಧಕರಿಗೆ 'ಸಾಧಕ ರತ್ನ" ಸನ್ಮಾನ ಕಾರ್ಯಕ್ರಮಗಳು ನಡೆಯಲಿವೆ ಎಂದು ಕರ್ನಾಟಕ ರಾಜ್ಯ ಅಲೆಮಾರಿ ಮತ್ತು ಆರೆ ಅಲೆಮಾರಿ ಜನಾಂಗಗಳ ಒಕ್ಕೂಟದ ಜಿಲ್ಲಾಧ್ಯಕ್ಷರಾದ ಲಕ್ಷ್ಮೀಕಾಂತ ಯಾದವ್ ತಿಳಿಸಿದ್ದಾರೆ.



ಚಿತ್ರದುರ್ಗ ನಗರದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಟಿಯಲ್ಲಿ ಈ ಮಾಹಿತಿ ನೀಡಿದ ಅವರು ರಾಜ್ಯ ಮಟ್ಟದ ಸಾಹಿತ್ಯ ಸಾಂಸ್ಕೃತಿಕ ಕಲೋತ್ಸವದ ಭಿತ್ತಿ ಪತ್ರವನ್ನು ಬಿಡುಗಡೆ ಮಾಡಿ ಮಾತನಾಡಿ ಈ ಕಾರ್ಯಕ್ರಮವನ್ನು ಕರ್ನಾಟಕ ಸರಕಾರದ ತೋಟಗಾರಿಕೆ ಸಚಿವರು ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಎಸ್. ಮಲ್ಲಿಕಾರ್ಜುನ ಕಾರ್ಯಕ್ರಮವನ್ನು ಉದ್ಘಾಟನೆ ಮಾಡಲಿದ್ದಾರೆ. ಹಿಂದುಳಿದ ವರ್ಗ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ್ ತಂಗಡಗಿ, ದಾವಣಗೆರೆ ಸಂಸದರಾದ ಶ್ರೀಮತಿ ಪ್ರಭಾ ಮಲ್ಲಿಕಾರ್ಜುನ ಮಾಜಿ ಮುಖ್ಯಮಂತ್ರಿಗಳಾದ ಬಿ. ಎಸ್. ಯಡಿಯೂರಪ್ಪ, ದಾವಣಗೆರೆ ಶಾಸಕರಾದ ಶಾಮನೂರು ಶಿವಶಂಕರಪ್ಪ ಭಾಗವಹಿಸಲಿದ್ದಾರೆ, ಕರ್ನಾಟಕ ವಿಧಾನ ಪರಿಷತ್ ಸದಸ್ಯರಾದ ಡಿ. ಟಿ. ಶ್ರೀನಿವಾಸ್ ಪ್ರತಿಭಾ ಪುರಸ್ಕಾರ ನೀಡಲಿದ್ದಾರೆ. ಹರಿಹರ ವಿಧಾನ ಸಭಾ ಶಾಸಕರಾದ ಬಿ. ಪಿ. ಹರೀಶ್ ಒಕ್ಕೂಟದ ಕ್ಯಾಲೆಂಡರ್ ಬಿಡುಗಡೆ ಮಾಡಲಿದ್ದಾರೆ, ಸಮಾರಂಭದ ಅಧ್ಯಕ್ಷತೆಯನ್ನು ಕರ್ನಾಟಕ ರಾಜ್ಯ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದ ಒಕ್ಕೂಟದ ರಾಜ್ಯಾಧ್ಯಕ್ಷರಾದ ಪ್ರಕಾಶ್ ಎಮ್. ವಹಿಸಲಿದ್ದಾರೆ ಉಪಾಧ್ಯಕ್ಷರಾದ ಬಿ. ಕೆ. ನಾರಾಯಣ ಸ್ವಾಮಿ,. ವಿಧಾನ ಪರಿಷತ್ ಸದಸ್ಯರಾದ ನಾಗರಾಜ್ ಯಾದವ್, ಮಾಜಿ ಸಚಿವರಾದ ಎಮ್. ಪಿ. ರೇಣುಕಾಚಾರ್ಯ, ಬಿಜೆಪಿ ದಾವಣಗೆರೆ ಜಿಲ್ಲಾ ಅಧ್ಯಕ್ಷರಾದ ರಾಜಶೇಖರ ನಾಗಪ್ಪ, ಯಶವಂತರಾವ್ ಜಾದವ್, ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷರಾದ ಸಿ. ಮಹಾಲಿಂಗಪ್ಪ ಕೊಪ್ಪಳ ಜಿಲ್ಲಾ ಬಿಜೆಪಿ ಉಪಾಧ್ಯಕ್ಷರಾದ ತುಕಾರಾಮ ಸೂರ್ವೆ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಸಭಾ ಕಾರ್ಯಕ್ರಮದ ನಂತರ ಶರಣರು ಸಂತ ಸಂದೇಶ ಕಾರ್ಯಕ್ರಮದಲ್ಲಿ ದಾವಣಗೆರೆ ವಿರಕ್ತಮಠದ ಶ್ರೀ ಬಸವಪ್ರಭು ಸ್ವಾಮೀಜಿ, ಬೆಂಗಳೂರು ನೆಲಮಂಗಲದ ಶ್ರೀ ವನಕಲ್ಲು ಮಲ್ಲೇಶ್ವರ ಮಹಾಸಂಸ್ಥಾನ ಮಠದ ಶ್ರೀ ಬಸವರಾಮಾನಂದ ಮಹಾಸ್ವಾಮೀಜಿ, ಬೆಂಗಳೂರು ಆಂಧ್ರಹಳ್ಳಿ ಶ್ರೀ ಗುರು ರಂಗಸ್ವಾಮಿ ಆಶ್ರಮ ದೊಂಬಿದಾಸರ ಸಮುದಾಯದ ಶ್ರೀ ಕರುಣಾಕರ ಸ್ವಾಮಿ, ಹಂಡಿಬಡಂಗನಾಥ ಮಠದ ಶ್ರೀ ಸಾಗರನಾಥಜೀ, ಬೀದರ್ ಹುಮ್ನಾಬಾದ್ ದುಮ್ಮನ್ಸೂರ್ ಹೆಳವ ಸಮಾಜ ಮುಕ್ತಿನಾಥ ಜನಕಲ್ಯಾಣ ಟ್ರಸ್ಟ್ ಗುರುಪೀಠದ ಶ್ರೀ ಶಂಕರಲಿಂಗ ಸ್ವಾಮೀಜಿಗಳು, ಅತೀ ಹಿಂದುಳಿದ ಮಠಾಧೀಶರ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರು ಛಲವಾದಿ ಮಹಾಸಂಸ್ಥಾನ ಚಿತ್ರದುರ್ಗದ ಶ್ರೀ ಬಸವನಾಗಿದೇವ ಸಂದೇಶ ನೀಡಲಿದ್ದಾರೆ

ಶಿವಮೊಗ್ಗ ಕುವೆಂಪು ವಿಶ್ವವಿದ್ಯಾನಿಲಯದ ಉಪನ್ಯಾಸಕರು ಎನ್.ಎಸ್.ಎಸ್ ವಿಭಾಗದ ಸಂಯೋಜನಾ ಧಿಕಾರಿಗಳಾದ ಡಾ. ಶುಭಾ ಮರವಂತೆಯವರ ಅಧ್ಯಕ್ಷತೆಯಲ್ಲಿ ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಸಮುದಾಯದ ಬದುಕು ಮತ್ತು ಭವಿಷ್ಯದ ಚಿಂತನೆಗಳು ಎಂಬ ವಿಷಯದ ಬಗ್ಗೆ ವಿಚಾರ ಗೋಷ್ಠಿ ನಡೆಯಲಿದೆ ನಿವೃತ್ತ ಆಯ್ಕೆಯ ಶ್ರೇಣಿ ಗ್ರಂಥಪಾಲಕರು ಅಲೆಮಾರಿ ಬದುಕಿನ ಬಗ್ಗೆ ಕುವೆಂಪು ವಿಶ್ವವಿದ್ಯಾನಿಲಯದ ಸಮಾಜ ಶಾಸ್ತ್ರ ಅಧ್ಯಯನದ ಉಪನ್ಯಾಸಕರಾದ ಡಾ. ವಿಮೋಚನಾ ಅಲೆಮಾರಿ ಜನರ ಭವಿಷ್ಯದ ಚಿಂತನೆಗಳ ಬಗ್ಗೆ ವಿಷಯ ಮಂಡನೆ ಮಾಡಲಿದ್ದಾರೆ.

ಕರ್ನಾಟಕ ರಾಜ್ಯ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದ ರಾಜ್ಯ ಮಟ್ಟದ ಸಾಹಿತ್ಯ ಸಾಂಸ್ಕೃತಿಕ ಕಲೋತ್ಸವ ನಡೆಯಲಿದ್ದು ಇದರಲ್ಲಿ 35% ಕ್ಕಿಂತ ಹೆಚ್ಚು ಅಂಕಗಳಿಸಿದ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದ ಎಸ್. ಎಸ್. ಎಲ್. ಸಿ ಮತ್ತು ಪಿ. ಯು. ಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ಸಾಧಕರಿಗೆ 'ಸಾಧಕ ರತ್ನ" ಪ್ರಶಸ್ತಿ ವಿವಿಧ ಸಾಂಸ್ಕೃತಿಕ ಮನೋರಂಜನ ಕಾರ್ಯಕ್ರಮಗಳು ನಡೆಯಲಿದೆ.

ಕರ್ನಾಟಕ ರಾಜ್ಯ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದ ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಪ್ರತಾಪ್ ಕುಮಾರ್ ಓ ಜ್ಯೋಗಿ ಮಾತನಾಡಿ ಈ ಕಾರ್ಯಕ್ರಮದಲ್ಲಿ ನಮ್ಮ ಚಿತ್ರದುರ್ಗ ಜಿಲ್ಲೆಯಿಂದ ಕರ್ನಾಟಕ ರಾಜ್ಯ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದಲ್ಲಿ ಬರುವ 46 ಜಾತಿಗಳ ನೂರಾರು ಜನರು ಭಾಗವಹಿಸಲಿದ್ದಾರೆ.ಇದರಲ್ಲಿಚಿತ್ರದುರ್ಗದ ರವಿಕುಮಾರ್, ಧನಂಜಯ, ಯಶೋಧರ ಹಾಗೂ ಸುಧಾಕರ ಈ ನಾಲ್ವರಿಗೆ ಸನ್ಮಾನ ಮಾಡಲಾಗುವುದು ಎಂದರು.

ಗೋಷ್ಟಿಯಲ್ಲಿ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗಗಳ ಒಕ್ಕೂಟದ ಗೌರವಾಧ್ಯಕ್ಷರಾದ ರಾಮು ಗೋಸಾಯಿ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ರವಿದಾಸರ್, ರಾಜು ಉಪಾಧ್ಯಕ್ಷರಾದ ಜ್ಯೋತಿ ದಾಸರ್, ಅಭೀಷೇಕ್, ಹೇಮಣ್ಣ, ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ವಸತಿ ಶಾಲೆಗಳ 6ನೇ ತರಗತಿ ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಯ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಡಾ.ಬಿ.ಆರ್. ಅಂಬೇಡ್ಕರ್, ಶ್ರೀಮತಿ ಇಂದಿರಾಗಾಂಧಿ ವಸತಿ ಶಾಲೆಗಳಲ್ಲಿ 2025–26ನೇ ಸಾಲಿಗೆ 6ನೇ ತರಗತಿ ದಾಖಲಾತಿಗಾಗಿ ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನಿಸಲಾಗಿದೆ. ಜನವರಿ 25 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದ್ದು, ಫೆಬ್ರವರಿ 15ರಂದು ಪ್ರವೇಶ ಪರೀಕ್ಷೆ ನಡೆಯಲಿದೆ. ಜಿಲ್ಲೆಯ ಯಾವುದೇ ಶಾಲೆಯಲ್ಲಿ 5ನೇ ತರಗತಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಪೋಷಕರು ತಮಗೆ ಸಮೀಪವಿರುವ ಜಿಲ್ಲೆಯ ಯಾವುದೇ ವಸತಿ ಶಾಲೆಗಳಿಗೆ ಭೇಟಿ ನೀಡಿ ಆನ್‌ಲೈನ್ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ವಿದ್ಯಾರ್ಥಿಯ ಖಂಖಿಖ ಸಂಖ್ಯೆ, ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳು, ಇತರೆ ಮೀಸಲಾತಿ ಅನ್ವಯವಾದಲ್ಲಿ ಸಂಬಂಧಪಟ್ಟ ಪ್ರಮಾಣ ಪತ್ರಗಳು ಹಾಗೂ ವಿದ್ಯಾರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಭಾವಚಿತ್ರ ಅವಶ್ಯಕವಾಗಿರುತ್ತವೆ. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಂದರ್ಭದಲ್ಲಿಯೇ ತಾವು ದಾಖಲಾಗಲು ಬಯಸುವ ವಸತಿ ಶಾಲೆಗಳನ್ನು ಆದ್ಯತಾ ಕ್ರಮದಲ್ಲಿ ಆಯ್ಕೆ ಮಾಡಬೇಕು. ಅಭ್ಯರ್ಥಿಯ ಮೆರಿಟ್, ಮೀಸಲಾತಿ ಹಾಗೂ ಪ್ರವೇಶ ಬಯಸುವ ಶಾಲೆಗಳ ಆದ್ಯತಾ ಕ್ರಮದ ಮೇಲೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ Computerised Auto Selection ಮೂಲಕ ಸೀಟು ಹಂಚಿಕೆ ಮಾಡಲಾಗುವುದು. ಅರ್ಜಿ ಸಲ್ಲಿಸಲು 2025ರ ಜನವರಿ 25 ಕೊನೆಯ ದಿನವಾಗಿದೆ. ಫೆಬ್ರವರಿ 12ರಂದು ಮಧ್ಯಾಹ್ನ 2.30 ರಿಂದ 4.30 ರವರೆಗೆ ಪ್ರವೇಶ ಪರೀಕ್ಷೆ ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ ಸಮೀಪದ ವಸತಿ ಶಾಲೆಗಳ ಪ್ರಾಂಶುಪಾಲರು ಅಥವಾ ಕೆಇಎ ಸಹಾಯವಾಣಿ ಸಂಖ್ಯೆ 080–23460460 ಗೆ ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ತಿಳಿಸಿದ್ದಾರೆ.

### ಜಿಲ್ಲಾಸ್ಪತ್ರೆ: ನಿಗಧಿತ ಶುಲ್ಕ ಪಾವತಿಸಿ ಕಡ್ಡಾಯವಾಗಿ ರಸೀದಿ ಪಡೆಯಿರಿ

» ಚಿತ್ರದುರ್ಗ

ಜಿಲ್ಲಾ ಆಸ್ಪತ್ರೆಯಲ್ಲಿ ಎ.ಬಿ–ಎ.ಆರ್.ಕೆ ಅಡಿಯಲ್ಲಿ ನೋಂದಣಿಯಾದ ಅರ್ಹ ಫಲಾನುಭವಿಗಳಿಗೆ ಎಲ್ಲಾ ರಕ್ತ ಪರೀಕ್ಷೆಗಳು, ಸಿ.ಟಿ.ಸ್ಕ್ಯಾನ್, ಎಕ್ಸ–ರೇ, ಸ್ಕ್ಯಾನಿಂಗ್, ಆರ್ಥೋಇಂಪ್ಲಾಂಟಗಳು, ಔಷಧಿಗಳು ಮತ್ತು ಮಾತ್ರೆಗಳು ಉಚಿತವಾಗಿ ನೀಡಲಾಗುತ್ತದೆ. ಒಂದು ವೇಳೆ ಎ.ಬಿ.–ಎ.ಆರ್.ಕೆ ಅಡಿಯಲ್ಲಿ ನೋಂದಣಿಯಾಗದ ರೋಗಿಗಳು ನಿಗದಿತ ಶುಲ್ಕವನ್ನು ಪಾವತಿಸಿ ಕಡ್ಡಾಯವಾಗಿ ರಸೀದಿಯನ್ನು ಕೇಳಿ ಪಡೆಯುವಂತೆ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ಮನವಿ ಮಾಡಿದ್ದಾರೆ. ರೋಗಿಗಳು ಆಸ್ಪತ್ರೆಗೆ ಬರುವಾಗ ತಮ್ಮ ಆಧಾರ್ ಕಾರ್ಡ, ರೇಷನ್ ಕಾರ್ಡ್‌ಗಳ ನಕಲು ಪ್ರತಿಗಳನ್ನು ತರುವುದು ಹಾಗೂ ಒಳ ರೋಗಿಗಳಾಗಿ ದಾಖಲಾಗುವ ಸಂದರ್ಭದಲ್ಲಿ ತಪ್ಪದೇ ಎ.ಬಿ.–ಎ.ಆರ್.ಕೆ ಕೊಠಡಿಗಳಲ್ಲಿ ಎಂಟ್ರಿ ಮಾಡಿಸಬೇಕು, ಆದರೆ ರೋಗಿಗಳು ಇತ್ತೀಚಿನ ದಿನಗಳಲ್ಲಿ ನೇರವಾಗಿ ಖಾಸಗಿ ಆಸ್ಪತ್ರೆಗೆ ತೆರಳಿ ನಂತರ ಬಂದು ರೆಫರಲ್ ಮಾಡುವಂತೆ ವೈದ್ಯಾಧಿಕಾರಿಗಳಿಗೆ ಒತ್ತಡವನ್ನು ಹಾಕುತ್ತಿರುತ್ತಾರೆ. ರೋಗಿಗಳು ಮೊದಲು ಸಕಾರಿ ಆಸ್ಪತ್ರೆಗೆ ಬಂದು ಚಿಕಿತ್ಸೆ ಪಡೆಯಬೇಕು. ಒಂದು ವೇಳೆ ಸದರಿ ಚಿಕಿತ್ಸೆ ಲಭ್ಯವಿಲ್ಲದಿದ್ದಾಗ ಎ.ಬಿ.–ಎ.ಆರ್.ಕೆ ಅಡಿಯಲ್ಲಿ ಖಾಸಗಿ ಆಸ್ಪತ್ರೆಗಳಿಗೆ ರೆಫರಲ್ ಮಾಡಿಕೊಡಲಾಗುತ್ತದೆ. ಜಿಲ್ಲಾ ಆಸ್ಪತ್ರೆಯಲ್ಲಿ ರೋಗಿಗಳು ಹಾಗೂ ಅವರ ಸಂಬಂಧಿಕರು ಯಾವುದೇ ಮಧ್ಯವರ್ತಿಗಳಿಗೆ ಹಣ ನೀಡಬಾರದು. ಯಾರದರೂ ಹಣ ಕೇಳಿದ್ದಲ್ಲಿ ಹಾಗೂ ಯಾವುದೇ ದೂರುಗಳು ಇದ್ದಲ್ಲಿ ಮೊಬೈಲ್ ಸಂಖ್ಯೆ 9448943163 ಗಮನಕ್ಕೆ ತರುವಂತೆ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ತಿಳಿಸಿದ್ದಾರೆ.

### ಅಹವಾಲು ಸ್ವೀಕಾರ

» ಬಳ್ಳಾರಿ

ಕರ್ನಾಟಕ ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ಅವರು ಜ.17 ಮತ್ತು 18 ರಂದು ಬಳ್ಳಾರಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಸಾರ್ವಜನಿಕರಿಂದ ಕುಂದುಕೊರತೆಗಳ ಅಹವಾಲು ಸ್ವೀಕಾರ ಮತ್ತು ವಿಚಾರಣೆ ನಡೆಸುವರು. ಜ.17 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಮತ್ತು ಮಧ್ಯಾಹ್ನ 2.30 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಸಾರ್ವಜನಿಕರ ಕುಂದುಕೊರತೆಗಳ ಅಹವಾಲು ಸ್ವೀಕಾರ ಮತ್ತು ವಿಚಾರಣೆ ನಡೆಸುವರು. ಜಿಲ್ಲೆಯಲ್ಲಿ ಯಾರಿಗಾದರೂ ಸರ್ಕಾರಿ ಅಧಿಕಾರಿ, ನೌಕರರಿಂದ ತಮಗೆ ಕಾನೂನು ರೀತ್ಯಾ ಆಗಬೇಕಾದ ಕೆಲಸದಲ್ಲಿ ವಿಳಂಬವೇನಾದರೂ ಆಗಿದ್ದರೆ ಅಥವಾ ಅಧಿಕಾರಿ, ನೌಕರರು ಯಾವುದೇ ತರಹದ ಭ್ರಷ್ಟಾಚಾರದಲ್ಲಿ ತೊಡಗಿದ್ದರೆ, ಅದರಿಂದ ತೊಂದರೆಗೊಳಗಾದ ಸಾರ್ವಜನಿಕರು ತಮ್ಮ ಅಹವಾಲುಗಳನ್ನು ಲಿಖಿತ ರೂಪದಲ್ಲಿ ಸಲ್ಲಿಸಬಹುದು. ಹಾಗಾಗಿ ದೂರುದಾರರು ಮತ್ತು ಎದುರುದಾರರು ನಿಗದಿತ ಸಮಯದಲ್ಲಿ ಹಾಜರಿದ್ದು, ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರ್ನಾಟಕ ಲೋಕಾಯುಕ್ತ ಬಳ್ಳಾರಿ ವಿಭಾಗದ ಪೊಲೀಸ್ ಅಧೀಕ್ಷಕರಾದ ಸಿದ್ದರಾಜು.ಸಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಾರತೀಯ ರೈತ ಒಕ್ಕೂಟದ ಹೇಳಿಕೆಗೆ ಜಿಲ್ಲಾ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಖಂಡನೆ

» ಚಿತ್ರದುರ್ಗ



ಭದ್ರಾ ಜಲಾಶಯದಿಂದ ವಿವಿ ಸಾಗರಕ್ಕೆ ನೀರು ಹರಿಸುವ ವಿಚಾರದಲ್ಲಿ ಭಾರತೀಯ ರೈತ ಒಕ್ಕೂಟದ ದಾವಣಗೆರೆ ಜಿಲ್ಲೆ ಪದಾಧಿಕಾರಿಗಳು ವಿರೋಧ ವ್ಯಕ್ತಪಡಿಸುತ್ತಿರುವುದಕ್ಕೆ ಜಿಲ್ಲಾ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ತೀವ್ರವಾಗಿ ಖಂಡಿಸುತ್ತದೆ.ರಾಜಕೀಯಹೇಳಿಕೆಗಳನೀಡಿ ರೈತರ ಭಾವನಾತ್ಮಕವಾಗಿ ಪ್ರಚೋದಿಸುವ ಕೆಲಸ ಯಾರೂ ಮಾಡಬಾರದೆಂದು ಸಮಿತಿ ವಿನಂತಿಸುತ್ತದೆ.

ಇಲ್ಲಿನಪತ್ರಕರ್ತರಭವನದಲ್ಲಿಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಮಿತಿ ಪದಾಧಿಕಾರಿಗಳು ಭದ್ರಾ ಜಲಾಶಯದಲ್ಲಿ ನಮ್ಮ ಪಾಲಿನ ನೀರು ಪಡೆಯಲು ಯಾರ ಅಪ್ಪಣೆಯೂ ಬೇಕಿಲ್ಲ ಎಂದಿದ್ದಾರೆ.

ಭದ್ರಾ ಮತ್ತು ತುಂಗಾ ನದಿಯಲ್ಲಿ ಬಯಲು ಸೀಮೆ ಪ್ರದೇಶಗಳಿಗೆ 29.90 ಟಿಎಂಸಿ ನೀರು ಹಂಚಿಕೆಯಾಗಿ ಎರಡು ದಶಕಗಳು ಕಳೆದಿವೆ. 17.4 ಟಿಎಂಸಿ ತುಂಗಾ ನದಿ ಹಾಗೂ 12.5 ಟಿಎಂಸಿ ಯಷ್ಟು ಭದ್ರಾ ನದಿಯಲ್ಲಿ ಪಾಲು ನೀಡಲಾಗಿದೆ. ಭದ್ರಾ ಮೇಲ್ದಂಡೆ ಕಾಮಗಾರಿ ಶೇ.50 ರಷ್ಟು ಪೂರ್ಣಗೊಂಡಿದೆ. ಇಂತಹ ಸಂದರ್ಭದಲ್ಲಿ ಖ್ಯಾತೆ ತೆಗೆಯುವುದು ಬಯಲು ಸೀಮೆ ರೈತರ ಹಿತದೃಷ್ಟಿಯಿಂದ ಒಳ್ಳೆಯದಲ್ಲ. ಭದ್ರಾ ಮೇಲ್ದಂಡೆಯಡಿ ತುಂಗಾದಲ್ಲಿ ಅತಿಹೆಚ್ಚು ನೀರಿನ ಪಾಲು ಇದೆ. ಜಗಳೂರಿಗೂ ಯೋಜನೆಯಡಿ ನೀರು ಪೂರೈಕೆಯಾಗುತ್ತಿದ್ದು ದಾವಣಗೆರೆ ರೈತರು ಭದ್ರಾ ಮೇಲ್ದಂಡೆ ಕಾಮಗಾರಿ ಶೀಘ್ರ ಪೂರ್ಣಗೊಳಿಸುವಂತೆ ಒತ್ತಾಯಿಸಿ ಚಿತ್ರದುರ್ಗ ಜಿಲ್ಲೆ ರೈತರ ಹೋರಾಟಕ್ಕೆ ದನಿ ಗೂಡಿಸಬೇಕೇ ವಿನಹ ಅಪಸ್ವರ ಎತ್ತಬಾರದು ಎಂದರು. ಲಭ್ಯತೆ ಆಧಾರದ ಮೇಲೆ ಸರ್ಕಾರ ಬಯಲು ಸೀಮೆಗೆ ನದಿ ನೀರು ಹಂಚಿಕೆ ಮಾಡಿದೆ. ಕೃಷ್ಣಾ ಟ್ರಿಬ್ಯುನಲ್ ನಲ್ಲಿ 21.5 ಟಿಎಂಸಿ, ಗೋದಾವರಿ ಜಲ ಹಂಚಿಕೆಯಲ್ಲಿ 2.40 ಟಿಎಂಸಿ, ವಿಜಯನಗರ ಕಾಲುವೆ ಆಧುನೀಕರಣ ಸೇರಿದಂತೆ ಇತರೆ ಸಣ್ಣ ನೀರಾವರಿ ಯೋಜನೆಗಳಿಂದ ಲಭ್ಯವಾದ 6 ಟಿಎಂಸಿ ನೀರು ಸೇರಿದಂತೆ ಒಟ್ಟು 29.90 ಟಿಎಂಸಿ ನೀರನ್ನು ಭದ್ರಾ ಮೇಲ್ದಂಡೆ ಯೋಜನೆಗೆ ಕಾಯ್ದಿರಿಸಿ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. 2.25 ಲಕ್ಷ ಹೆಕ್ಟೇರು ಪ್ರದೇಶಗಳಿಗೆ ನೀರುಣಿಸಲಾಗುತ್ತಿದೆ.

ಭದ್ರಾ ಮೇಲ್ದಂಡೆ ಯೋಜನೆಯಡಿ ಲಭ್ಯವಾಗುವ ನೀರನ್ನ ಕೆರೆ ತುಂಬಿಸಲು, ಹಾಗೂ ಮೈ ಕ್ರೋ ಇರಿಗೇಷನ್ ಮೂಲಕ ರೈತರ ಜಮೀನುಗಳಿಗೆ ಹರಿಸಲಾಗುತ್ತಿದೆ. ಮೈಕ್ರೋ ಇರಿಗೇಶನ್ ಗೆ 21.90 ಟಿಎಂಸಿ, 367 ಕೆರೆ ತುಂಬಿಸಲು 6 ಟಿಎಂಸಿ, ವಾಣಿ ವಿಲಾಸ ಸಾಗರಕ್ಕೆ ಎರಡು ಟಿಎಂಸಿ ನೀರು ಮೀಸಲಿಡಲಾಗಿದೆ. ಯೋಜನೆಯಡಿ ಭತ್ತ ಬೆಳೆಯಲು ಜಮೀನುಗಳಲ್ಲಿ ಮನಸೋ ಇಚ್ಚೆ ನೀರು ನಿಲುಗಡೆ ಮಾಡಿಕೊಳ್ಳುತ್ತಿಲ್ಲ. ಬದಲಾಗಿ ಕೆರೆಗಳಿಗೆ ನೀರು ತುಂಬಿಸಿ ಅಂತರ್ಜಲ ಮಟ್ಟ ಹೆಚ್ಚಳ ಮಾಡಿಕೊಳ್ಳಲಾಗುತ್ತಿದೆ. ಇದರಿಂದಾಗಿ ಫ್ಲೋರೈಡ್ ನೀರು ಕುಡಿಯುತ್ತಿದ್ದ ಚಿತ್ರದುರ್ಗ ಜಿಲ್ಲೆಯ ಜನರು ಶುದ್ದ ನೀರು ಕುಡಿಯಲು ಪೂರಕ ವಾತಾವರಣ ಸೃಷ್ಟಿಸಲಾಗುತ್ತಿದೆ. ವಿವಿ ಸಾಗರ ಜಲಾಶಯದಿಂದ ಈಗಾಗಲೇ ಹೊಳಲ್ಕೆರೆ, ಚಿತ್ರದುರ್ಗ, ಹಿರಿಯೂರು, ಚಳ್ಳಕೆರೆ ತಾಲೂಕಿನ ಸೈನ್ಸ್ ಸಿಟಿಗೂ ನೀರು ಒಯ್ಯಲಾಗಿದೆ.ನೀರು ರಾಷ್ಟ್ರೀಯ ಆಸ್ತಿ ಎಂಬುದ ಎಲ್ಲರೂ ಅರಿಯುವುದು ಒಳಿತು ಎಂದು ಸಲಹೆ ಮಾಡಿದೆ.

ಭದ್ರಾ ಮೇಲ್ದಂಡೆ ಯೋಜನೆ ಮಂಜೂರಾತಿ ಹಾಗೂ ಕಾಮಗಾರಿ ಮುನ್ನಡೆಸಲು ಕಾಂಗ್ರೆಸ್, ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು ಬೆಂಬಲಕ್ಕೆ ನಿಂತಿವೆ.ಈ ವಿಚಾರದಲ್ಲಿ ರಾಜಕೀಯದ ಮಾತುಗಳು ಬೇಡ. ಆಯಾ ಸಂದರ್ಭದ ಅಧಿಕಾರದ ವೇಳೆ ಕಾಮಗಾರಿಗೆ ಅಗತ್ಯ ಹಣಕಾಸು ನೆರವು ನೀಡಿದ್ದಾರೆ.ಕಾಮಗಾರಿ ಶೇಕಡಾ 50ರಷ್ಟು ಪೂರ್ಣಗೊಂಡಿದ್ದು ಬೇಗನೆ ಪೂರ್ಣಗೊಳ್ಳಲು ಅನುದಾನದ ಅಗತ್ಯ ಇದೆ. ಕೇಂದ್ರ ಸರ್ಕಾರ ತನ್ನ ಬಜೆಟ್ ಘೋಷಿತ 5300 ಕೋಟಿ ರು ಕೊಡ್ತಿಲ್ಲ, ರಾಜ್ಯ ಸರ್ಕಾರ ಕೂಡಾ ಸೂಕ್ತವಾಗಿ ಸ್ಪಂದಿಸದ ಕಾರಣ ಕಾಮಗಾರಿ ನೆನೆಗುದಿಗೆ ಬಿ ಭದ್ರಾ ಮೇಲ್ದಂಡೆ ಯಡಿ ಜಗಳೂರು ತಾಲೂಕಿಗೂ ನೀರುಣಿಸಲಾಗುತ್ತಿದೆ. ಜಗಳೂರು ದಾವಣಗೆರೆ ಜಿಲ್ಲೆಯಲ್ಲಿದೆ ಎಂಬ ಸಂಗತಿ ಅಲ್ಲಿನ ಹೋರಾಟಗಾರರಿಗೆ ಅರಿವಿದ್ದರೆ ಒಳಿತು..ಜಗಳೂರು ತಾಲೂಕಿನ ಕಾಮಗಾರಿ ಇದುವರೆಗೂ ಆರಂಭವಾಗಿಲ್ಲ. ಈ ಬಗ್ಗೆ ಭಾರತೀಯ ರೈತ ಒಕ್ಕೂಟದ ಪದಾಧಿಕಾರಿಗಳು ಹೋರಾಟ ನಡೆಸಿ ತಮ್ಮ ಜಿಲ್ಲೆಯ ಬರಡು ಪ್ರದೇಶವಾದ ಜಗಳೂರು ತಾಲೂಕಿಗೆ ನ್ಯಾಯ ಸಲ್ಲಿಸಬೇಕಾಗಿದೆ. ಈ ವಿಚಾರದಲ್ಲಿ ದುರ್ಗದ ಹೋರಾಟಗಾರರ ಜೊತೆ ದನಿಗೂಡಿಸಲಿ ಎಂದು ಸಮಿತಿ ಮನವಿ ಮಾಡಿದೆ. ಭಾರತೀಯ ರೈತ ಒಕ್ಕೂಟದ ಪದಾಧಿಕಾರಿಗಳು ತುಂಗಾದಿಂದ ನೀರು ಒಯ್ಯಲಿ ಎಂದಿದ್ದಾರೆ. ಭದ್ರಾ ಮೇಲ್ದಂಡೆಗೆ ತುಂಗಾದಿಂದಲೇ ಅತಿ ಹೆಚ್ಚು ನೀರಿನ ಪಾಲು ಇದೆ. ಭದ್ರಾ ಜಲಾಶಯ ಭರ್ತಿಯಾಗಿರುವುದರಿಂದ ಅಲ್ಲಿರುವ ತಮ್ಮ ಪಾಲಿನ ನೀರನ್ನು ಬಳಸಿಕೊಳ್ಳಲಾಗುತ್ತಿದೆ. ಭಾರತೀಯ ರೈತ ಒಕ್ಕೂಟದ ಪದಾಧಿಕಾರಿಗಳು ಚಿತ್ರದುರ್ಗ ಜಿಲ್ಲೆಯ ರೈತರು ಕೂಡಾ ಭದ್ರಾ ಅಚ್ಚುಕಟ್ಟು ಪ್ರದೇಶದ ವ್ಯಾಪ್ತಿಗೆ ಬರಲಿದ್ದಾರೆ ಎಂಬ ವಾಸ್ತವ ಅರಿಯಲಿ. ಈ ಬಗ್ಗೆ ಒಕ್ಕೂಟದ ಪದಾಧಿಕಾರಿಗಳಿಗೆ ಅವರರವರ ಮನೆ ದೇವರು ಸನ್ಮಾರ್ಗ ದಯಪಾಲಿಸಲಿ ಎಂದು ಸಮಿತಿ ಪ್ರಾರ್ಥಿಸಿದೆ.

ನೀರಾವರಿ ಅನುಷ್ಠಾನ ಹೋರಾಟ ಸಮಿತಿಯ ಬೇಡರೆಡ್ಡಿಹಳ್ಳಿ ಬಸವರೆಡ್ಡಿ, ಜೆ.ಯಾದವರೆಡ್ಡಿ, ಕೆ.ಸಿ.ಹೊರಕೇರಪ್ಪ, ಹಂಪಯ್ಯನ ಮಾಳಿಗೆ ಧನಂಜಯ, ಆರ್.ಬಿ.ನಿಜಲಿಂಗಪ್ಪ, ಕಬ್ಬಿಗೆರೆ ನಾಗರಾಜ್, ಸಮಿತಿ ಪ್ರಧಾನ ಕಾರ್ಯದರ್ಶಿ ಕೆ.ಆರ್.ದಯಾನಂದ, ಸಂಚಾಲಕ ಚಿಕ್ಕಪ್ಪನಹಳ್ಳಿ ಷಣ್ಮುಖ, ರೈತ ಸಂಘದ ಮುಖಂಡರಾದ ಮಲ್ಲಾಪುರ ತಿಪ್ಪೇಸ್ವಾಮಿ, ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ಚಂದ್ರಶೇಖರ ನಾಯ್ಕ, ಬಾಗೇನಹಾಳು ಕೊಟ್ರಬಸಪ್ಪ, ಹಳಿಯೂರು ಸಿದ್ದಪ್ಪ ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಗ್ಯಾರಂಟಿ ಯೋಜನೆಗಳ ಜಾರಿಯಲ್ಲಿ ಜಿಲ್ಲೆಯಲ್ಲಿ ಶೇ.98 ರಷ್ಟು ಯಶಸ್ಸು: ಶಾಮನೂರು ಟಿ ಬಸವರಾಜ್

» ದಾವಣಗೆರೆ




ಗ್ಯಾರಂಟಿ ಯೋಜನೆಗಳಿಂದ ಜಿಲ್ಲೆಯಲ್ಲಿನ ಬಹುತೇಕ ಕುಟುಂಬಗಳು ಆರ್ಥಿಕವಾಗಿ ಸಬಲರಾಗಲು ಕಾರಣವಾಗಿದ್ದು ಈ ಯೋಜನೆಗಳ ಅನುಷ್ಠಾನದಲ್ಲಿ ಶೇ 98 ಕ್ಕಿಂತ ಹೆಚ್ಚು ಪ್ರಗತಿಯನ್ನು ಸಾಧಿಸಲಾಗಿದೆ ಎಂದು ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಶಾಮನೂರು ಟಿ. ಬಸವರಾಜ್ ತಿಳಿಸಿದರು.

ಅವರು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗುರುವಾರ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಶಕ್ತಿ ಯೋಜನೆ; ಶಕ್ತಿ ಯೋಜನೆಯಡಿ ದಾವಣಗೆರೆ ವಿಭಾಗದ ವ್ಯಾಪ್ತಿಯಲ್ಲಿ ಡಿಸೆಂಬರ್ ಅಂತ್ಯದವರೆಗೆ 67,75,1001 ಟ್ರಿಪ್‌ಗಳಲ್ಲಿ ಮಹಿಳೆಯರು ಪ್ರಯಾಣಿಸಿದ್ದು ಇದರ ವೆಚ್ಚವಾಗಿ ರೂ.189,13,62,548 ರೂ.ಗಳನ್ನು ಸರ್ಕಾರದಿಂದ ಭರಿಸಲಾಗಿದೆ.

ಗೃಹಜ್ಯೋತಿ; ದಾವಣಗೆರೆ ಮತ್ತು ಹರಿಹರ ವಿಭಾಗದಿಂದ ಒಟ್ಟು 556624 ವಿದ್ಯುತ್ ಸಂಪರ್ಕ ಪಡೆದ ಆರ್.ಆರ್.ಸಂಖ್ಯೆಗಳಿದ್ದು ಇದರಲ್ಲಿ 502344 ಆರ್.ಆರ್.ಸಂಖ್ಯೆಯ ಫಲಾನುಭವಿಗಳು ಗೃಹಜ್ಯೋತಿಯಡಿ ನೊಂದಣಿಯಾಗಿದ್ದು ಇದರ ವೆಚ್ಚವಾಗಿ ಡಿಸೆಂಬರ್ ತಿಂಗಳಲ್ಲಿ ರೂ.21 ಕೋಟಿ ವೆಚ್ಚವನ್ನು ಹೊಂದಾಣಿಕೆ ಮಾಡಲಾಗಿದೆ.

ಗೃಹಲಕ್ಷ್ಮಿ; ಗೃಹಲಕ್ಷ್ಮಿ ಯೋಜನೆಯಡಿ ಮನೆ ಯಜಮಾನಿಯರಿಗೆ ಪ್ರತಿ ತಿಂಗಳು 2 ಸಾವಿರ ರೂ.ಗಳನ್ನು ನೀಡುತ್ತಿದ್ದು ಅಕ್ಟೋಬರ್ ಅಂತ್ಯದವರೆಗೆ 360849 ಮಹಿಳೆಯರಿಗೆ ಆರಂಭದಿಂದ ಇಲ್ಲಿಯವರೆಗೆ ರೂ.501.72 ಕೋಟಿ ಹಣ ವರ್ಗಾವಣೆ ಮಾಡಲಾಗಿದೆ.

ಅನ್ನಭಾಗ್ಯ; ಅನ್ಯಭಾಗ್ಯ ಯೋಜನೆಯಡಿ ಪ್ರತಿ ಕುಟುಂಬದ ಸದಸ್ಯರಿಗೆ ತಿಂಗಳಿಗೆ 10 ಕೆ.ಜಿ.ಅಕ್ಕಿ ನೀಡುತ್ತಿದ್ದು ಇದರಲ್ಲಿ 5 ಕೆ.ಜಿ.ಅಕ್ಕಿ ನೀಡಿ ಉಳಿದ 5 ಕೆಜಿಯ ಮೊತ್ತವನ್ನು ಅವರ ಖಾತೆಗೆ ಜಮಾ ಮಾಡಲಾಗುತ್ತಿದೆ. ಸೆಪ್ಟೆಂಬರ್ ಅಂತ್ಯದವರೆಗೆ 342968 ಕಾರ್ಡ್‌ದಾರರಲ್ಲಿನ 1229893 ಸದಸ್ಯರಿಗೆ ಯೋಜನೆ ಆರಂಭವಾದಾಗಿನಿಂದ ರೂ.286.66 ಕೋಟಿಯನ್ನು ಡಿಬಿಟಿ ಮೂಲಕ ಅವರ ಖಾತೆಗೆ ವರ್ಗಾಯಿಸಲಾಗಿದೆ.

ಯುವನಿಧಿ; ಯುವನಿಧಿ ಯೋಜನೆಯಡಿ ಪದವಿ ಉತ್ತೀರ್ಣರಾದ ಹಾಗೂ ಡಿಪ್ಲೊಮಾ ಪಾಸಾದವರಿಗೆ ಶಿಷ್ಯವೇತನವಾಗಿ ಪ್ರತಿ ತಿಂಗಳು ಪದವೀಧರರಿಗೆ ರೂ.3000 ಮತ್ತು ಡಿಪ್ಲೊಮಾದಾರರಿಗೆ ರೂ.1500 ನೀಡಲಾಗುತ್ತಿದೆ. ಜಿಲ್ಲೆಯಲ್ಲಿ 2023 ರಲ್ಲಿ ಉತ್ತೀರ್ಣರಾದ 5802 ಅಭ್ಯರ್ಥಿಗಳಿಗೆ ರೂ.8,46,8700 ರೂ.ಗಳನ್ನು ಶಿಷ್ಯವೇತನವಾಗಿ ಅವರ ಖಾತೆಗೆ ಜಮಾ ಮಾಡಲಾಗಿದೆ.

ಪೋಸ್ಟರ್ ಬಿಡುಗಡೆ; 2024 ನೇ ಸಾಲಿನಲ್ಲಿ ಉತ್ತೀರ್ಣರಾದ ಪದವೀಧರರಿಗೆ ಹಾಗೂ ಡಿಪ್ಲೊಮಾ ಪಾಸಾದವರು ಯುವನಿಧಿಯಡಿ ನೊಂದಣಿ ಮಾಡಲು ಪೋಸ್ಟರ್ ಬಿಡುಗಡೆ ಮಾಡಲಾಯಿತು. ಗ್ಯಾರಂಟಿಗಳು ಸರ್ಕಾರದ ಮಹತ್ವಕಾಂಕ್ಷೆ ಯೋಜನೆಗಳಾಗಿದ್ದು ಎಲ್ಲಾ ಇಲಾಖೆ ಅಧಿಕಾರಿಗಳು ಶೇ 100 ರಷ್ಟು ಸಾಧನೆ ಮಾಡಬೇಕು. ಯಾರಿಗಾದರೂ ಡಿಬಿಟಿ ಸೇರಿದಂತೆ ಇನ್ನಿತರೆ ಸಮಸ್ಯೆಯಾದಲ್ಲಿ ಅವರ ದಾಖಲೆಗಳನ್ನು ಸರಿಪಡಿಸುವ ಕೆಲಸ ಮಾಡಬೇಕೆಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲಾನಾಯ್ಕ್, ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯರಾದ ಅನೀಶ್ ಪಾಷ, ನಂಜಾನಾಯ್ಕ್ ,ಅನಿತಾಬಾಯಿ ಮಾಲತೇಶ, ರೇವಣಸಿದ್ದಪ್ಪ , ಮಂಜಣ್ಣ, ಡೋಲ್ ಚಂದ್ರು, ಸುಭಾನ್ ಸಾಬ್, ಎನ್ ನೀಲಗಿರಿಯಪ್ಪ, ಕೆ.ಶಿವಶಂಕರ್, ಶಶಿಕಲಾ ನಾಕುದರಿ, ನಾಗರಾಜ ಸಿ, ಎ.ಅರ್ ಚಂದ್ರಶೇಖರ್, ರಾಘವೇಂದ್ರ, ಎಸ್ ಗಿರೀಶ್ ಹಾಗೂ ಇನ್ನಿತರೆ ಸದಸ್ಯರು, ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

### ಜಿಲ್ಲಾ ಕೃಷಿಕ ಸಮಾಜ: ನೂತನ ಪದಾಧಿಕಾರಿಗಳ ಆಯ್ಕೆ



» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ಕೃಷಿಕ ಸಮಾಜಕ್ಕೆ ಬುಧವಾರ ನಡೆದ ಚುನಾವಣೆಯಲ್ಲಿ ಪದಾಧಿಕಾರಿಗಳನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು. ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷರಾಗಿ ಎನ್.ಆರ್.ಮಹೇಶ್ವರಪ್ಪ, ಉಪಾಧ್ಯಕ್ಷರಾಗಿ ಎಸ್.ಧರಣೇಶ್, ಪ್ರಧಾನ ಕಾರ್ಯದರ್ಶಿಯಾಗಿ ರಾಗಿ ಶಿವಮೂರ್ತಪ್ಪ, ಖಜಾಂಚಿಯಾಗಿ ಸಿ.ಭಕ್ತಪ್ರಹ್ಲಾದ್, ರಾಜ್ಯಪ್ರತಿನಿಧಿಯಾಗಿ ವಿ.ಜಿ.ಪರಮೇಶ್ವರಪ್ಪ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. 2025–26 ರಿಂದ 2029–30ನೇ ಸಾಲಿನ ಐದು ವರ್ಷಗಳ ಅವಧಿಗೆ ಚಿತ್ರದುರ್ಗ ಜಿಲ್ಲಾ ಕೃಷಿಕ ಸಮಾಜದ ಪದಾಧಿಕಾರಿಗಳ ಚುನಾವಣೆಯನ್ನು ಬುಧವಾರ ಜಿಲ್ಲಾ ಕೃಷಿಕ ಸಮಾಜಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ ಸಭೆಯನ್ನು ಚಿತ್ರದುರ್ಗ ನಗರದ ಜಂಟಿ ಕೃಷಿ ನಿರ್ದೇಶಕ ಕಚೇರಿಯಲ್ಲಿ ಏರ್ಪಡಿಸಲಾಯಿತು. ಸಭೆಯಲ್ಲಿ ಹಂಗಾಮಿ ಅಧ್ಯಕ್ಷರಾಗಿ ರಮೇಶಪ್ಪ ಹೊಳಲ್ಕೆರೆ ಅವರು ಅಧ್ಯಕ್ಷತೆ ವಹಿಸಿದ್ದರು ಎಂದು ಜಿಲ್ಲಾ ಕೃಷಿಕ ಸಮಾಜದ ಪದನಿಮಿತ್ತ ಕಾರ್ಯದರ್ಶಿ ಹಾಗೂ ಜಂಟಿ ಕೃಷಿ ನಿರ್ದೇಶಕ ಬಿ.ಮಂಜುನಾಥ್ ತಿಳಿಸಿದ್ದಾರೆ.

### ತ್ರೈಮಾಸಿಕ ಕೆಡಿಪಿ ಸಭೆ

» ದಾವಣಗೆರೆ

ಪ್ರಸಕ್ತ ಸಾಲಿನ ತ್ರೈಮಾಸಿಕ ಕೆಡಿಪಿ ಸಭೆಯನ್ನು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್ ಮಲ್ಲಿಕಾರ್ಜುನ್ ಅವರ ಅಧ್ಯಕ್ಷತೆಯಲ್ಲಿ ಜ.20 ರಂದು ಮಧ್ಯಾಹ್ನ 3 ಗಂಟೆಗೆ ಜಿಲ್ಲಾ ಪಂಚಾಯತ್ ಎಸ್.ಎಸ್.ಮಲ್ಲಿಕಾರ್ಜುನ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

## ಪ್ರಮುಖ ಸುದ್ದಿ

# ರೈತರ ಎಲ್ಲಾ ದಾಖಲಾತಿಗಳ ಸುರಕ್ಷತೆ ಮತ್ತು ವಿತರಣೆಗಾಗಿ ಭೂಸುರಕ್ಷಾ ಯೋಜನೆ ಜಾರಿ: ಶಾಸಕ ಟಿ.ರಘುಮೂರ್ತಿ

» ಚಳ್ಳಕೆರೆ



ತಾಲ್ಲೂಕಿನ ಸಮಸ್ತ ರೈತರ ಭೂದಾಖಲಾತಿಗಳನ್ನು ಕಂಪ್ಯೂಟರೀಕರಣದ ಮೂಲಕ ಈಗಾಗಲೇ ಸಿದ್ದಪಡಿಸಿದ್ದು, ರೈತರು ಯಾವುದೇ ಗ್ರಾಮದ ಭೂದಾಖಲೆಗಳನ್ನು ಪಡೆಯಲು ಸರ್ಕಾರ ಅನುವು ಮಾಡಿಕೊಟ್ಟಿದೆ. ರೈತರಿಗೆ ಸಂಬಂಧಪಟ್ಟ ಭೂದಾಖಲಾತಿಗಳು ತಾಲ್ಲೂಕು ಕಚೇರಿಯೂ ಸೇರಿದಂತೆ ನಾಡಕಚೇರಿಯಲ್ಲಿಯೂ ಲಭ್ಯವಾಗಲಿದೆ. ಭೂದಾಖಲೆ ಪಡೆಯಲು ರೈತರು ಪರದಾಡುವ ಸ್ಥಿತಿ ಅವಲೋಕಿಸಿ ಸರ್ಕಾರ ಭೂಸುರಕ್ಷಾ ಯೋಜನೆಯನ್ನು ಜಾರಿಗೊಳಿಸಿದೆ ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಗುರುವಾರ ಸಂಜೆ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಸರ್ಕಾರದ ಕಂದಾಯ ಇಲಾಖೆಯ ಮಹತ್ತರ ಯೋಜನೆಯಾದ ಭೂಸುರಕ್ಷ ಯೋಜನೆಯನ್ನು ಕಂಪ್ಯೂಟರ್ ಮೂಲಕ ಚಾಲನೆ ನೀಡಿ ಮಾತನಾಡಿದರು. ಕಳೆದ ಹಲವಾರು ವರ್ಷಗಳಿಂದ ರೈತರು ತಮ್ಮ ದಾಖಲೆಗಳನ್ನು ಪಡೆಯಲು ತಾಲ್ಲೂಕು ಕಚೇರಿಗೆ ಅಲೆದಾಡಬೇಕಿತ್ತು. ತಂದನಂತರ ಬದಲಾವಣೆ ಮಾಡಿ ವಿವಿಧ ನಾಡಕಚೇರಿಗೆ ನೀಡಲಾಯಿತು, ಮುಂದುವರೆದ ಭಾಗವಾಗಿ ಕಂದಾಯ ಇಲಾಖೆಯ ಹಿರಿಯ ಅಧಿಕಾರಿಗಳ ಮಾರ್ಗದರ್ಶನ ಹಾಗೂ ಕಂದಾಯ ಸಚಿವ ಕೃಷ್ಣಬೈರೇಗೌಡರ ನಿರಂತರ ಶ್ರಮದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿಭೂಸುರಕ್ಷಾದಾಖಲಾತಿಗಳನ್ನು ನೀಡಲು ಈ ವ್ಯವಸ್ಥೆ ಮಾಡಿದ್ದು, ಇದರ ಸದುಪಯೋಗವನ್ನು ರೈತರು ಪೂರ್ಣಪ್ರಮಾಣದಲ್ಲಿಪಡೆದುಕೊಳ್ಳುವಂತೆ ಮನವಿ ಮಾಡಿದರು.

ನಮ್ಮ ತಾಲ್ಲೂಕಿನ ಭೂಮಿಗೆ ಸಂಬಂಧಪಟ್ಟ ಯಾವುದೇ ದಾಖಲೆಯನ್ನು ಅತಿಸುಲಭವಾಗಿ ಪಡೆಯುವ ಅವಕಾಶವನ್ನು ಸರ್ಕಾರ ಮಾಡಿಕೊಟ್ಟಿದೆ. ಕೆಲವೊಮ್ಮೆ ಗ್ರಾಮೀಣ ಪ್ರದೇಶಗಳಲ್ಲಿ ಭೂ ದಾಖಲಾತಿಯನ್ನು ಪಡೆಯಲು ಅಡೆತಡೆಯಾಗುತ್ತಿದ್ದು, ಇದನ್ನು ತಪ್ಪಿಸಲು ಸರ್ಕಾರ ಈ ಯೋಜನೆ ಜಾರಿಗೊಳಿಸಿದೆ ಎಂದರು. ಖಾತೆಬದಲಾವಣೆ, ಪೌತಿಖಾತೆ, ವರ್ಗಾವಣೆ ಮುಂತಾದವುಗಳನ್ನು ಪಡೆಯಲು ನೇರವಾಗಿ ತಾಲ್ಲೂಕು ಕಚೇರಿಗೆ ಆಗಮಿಸಬೇಕಿತ್ತು. ಇನ್ನುಳಿದ ಯಾವುದೇ ಭೂದಾಖಲೆಗಳನ್ನು ಬೇಕಾದಲ್ಲಿ ಸಂಬಂಧಪಟ್ಟ ನಾಡಕಚೇರಿ, ತಾಲ್ಲೂಕು ಕಚೇರಿಯನ್ನು ಜನರು ಸಂಪರ್ಕಿಸಬಹುದು ಎಂದರು. ತಹಶೀಲ್ದಾರ್ ರೇಹಾನ್‌ಪಾಷ, ಶಿರಸ್ಥೇದಾರ್, ಸದಾಶಿವಪ್ಪ, ಗಿರೀಶ್, ನಾಡಕಚೇರಿ ತಹಶೀಲ್ದಾರ್ ಮಹಮ್ಮದ್‌ರಫೀ, ಕಂದಾಯಾಧಿಕಾರಿ ತಿಪ್ಪೇಸ್ವಾಮಿ, ಗ್ರಾಮ ಲೆಕ್ಕಿಗ ಪ್ರಕಾಶ್, ಡಿ.ಶ್ರೀನಿವಾಸ್, ನಗರಸಭಾ ಸದಸ್ಯ ಕೆ.ವೀರಭದ್ರಪ್ಪ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಕೇಂದ್ರದಿಂದಲೂ ಮನೆ ಯಜಮಾನಿ ಖಾತೆಗೆ ಹಣ ಘೋಷಣೆ ಸಾಧ್ಯತೆ

ಕೇಂದ್ರ ಬಜೆಟ್ 2025: ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಫೆಬ್ರವರಿ 1, 2025ರಂದು ಕೇಂದ್ರ ಬಜೆಟ್ ಮಂಡಿಸಲಿದ್ದಾರೆ. ಬಹುತೇಕ ಮಂದಿ ಅದರಲ್ಲೂ ಮಧ್ಯಮ ವರ್ಗದವರು ತುಂಬಾ ನಿರೀಕ್ಷೆಗಳನ್ನು ಇಟ್ಟುಕೊಂಡಿದ್ದಾರೆ. ಹಾಗಾದರೆ, ಬಹುನಿರೀಕ್ಷಿತ ಯೋಜನೆಗಳ ಭಾಗವಾಗಿ ಮಹಿಳೆಯರ ಖಾತೆಗೆ ಹಣ ವರ್ಗಾವಣೆ ಮಾಡುವ ಯೋಜನೆ ಘೋಷಣೆ ಮಾಡುವ ಸಾಧ್ಯತೆಯಿದೆ ಎನ್ನುವ ಕೂಗುಗಳು ಜೋರಾಗಿ ಕೇಳಿಬರುತ್ತಿವೆ. ಈಗಾಗಲೇ ಕರ್ನಾಟಕ ರಾಜ್ಯದಲ್ಲಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರವು ಪಂಚ ಗ್ಯಾರಂಟಿಗಳನ್ನು ಘೋಷಣೆ ಮಾಡಿದೆ. ಈ ಪೈಕಿ ಗೃಹಲಕ್ಷ್ಮಿ ಯೋಜನೆಯಡಿಯಲ್ಲಿ ಪ್ರತಿ ತಿಂಗಳು ಮನೆ ಯಜಮಾನಿ ಖಾತೆಗೆ 2,000 ರೂಪಾಯಿ ಹಾಕಲಾಗುತ್ತಿದೆ. ಹಾಗೆಯೇ ಕೇಂದ್ರ ಸರ್ಕಾರವು ಇದೀಗ ಮಹಿಳೆಯರ ಖಾತೆಗೆ ಹಣ ವರ್ಗಾವಣೆ ಮಾಡುವ ಯೋಜನೆಯನ್ನು ಮುಂಬರುವ ಬಜೆಟ್‌ನಲ್ಲಿ ಘೋಷಣೆ ಮಾಡುವ ಸಾಧ್ಯತೆಯಿದೆ ಎನ್ನುವ ಮಾತುಗಳು ಕೇಳಿಬರುತ್ತಿವೆ.

ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಫೆಬ್ರವರಿ 1, 2025ರಂದು ಕೇಂದ್ರ ಬಜೆಟ್ ಅನ್ನು ಮಂಡನೆ ಮಾಡಲಿದ್ದಾರೆ. ಬಜೆಟ್‌ನಲ್ಲಿ ಕೆಲವು ಬಹುನಿರೀಕ್ಷಿತ ಘೋಷಣೆಗಳ ಬಗ್ಗೆ ಹಣಕಾಸು ಸಚಿವಾಲಯದ ಮೂಲಗಳು ಈ ಹಿಂದೆ ಕೆಲವು ಮಾಹಿತಿಯನ್ನು ಬಹಿರಂಗಪಡಿಸಿವೆ. ಮಹಿಳೆಯರಿಗೆ ನೆರವಾಗುವ ಹಿನ್ನೆಲೆ ಅವರ ಖಾತೆಗೆ ಹಣ ವರ್ಗಾವಣೆ ಮಾಡುವ ಯೋಜನೆ ಜಾರಿಗೆ ತರುವ ಕುರಿತು ಕೇಂದ್ರ ಸರ್ಕಾರ ಬಜೆಟ್‌ನಲ್ಲಿ ಘೋಷಣೆ ಮಾಡುವ ಸಾಧ್ಯತೆಯಿದೆ ಎಂದು ಹೇಳಲಾಗುತ್ತಿದೆ.ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಫೆಬ್ರವರಿ 1, 2025ರಂದು ಮಂಡನೆ ಮಾಡಲಿದ್ದಾರೆ. ಈ ಮೂಲಕ ಅವರು ಸತತ 8ನೇ ಬಾರಿಗೆ ಬಜೆಟ್ ಮಂಡಿಸಿದ ಕೀರ್ತಿಗೆ ಪಾತ್ರರಾಗಲಿದ್ದಾರೆ. ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದ ಎನ್‌ಡಿಎ ಸರ್ಕಾರದ 3ನೇ ಬಾರಿಯ 2ನೇ ಪೂರ್ಣ ಪ್ರಮಾಣದ ಬಜೆಟ್ ಇದಾಗಲಿದೆ. ಆರ್ಥಿಕ ತಜ್ಞರ ಪ್ರಕಾರ, ಮಹಿಳೆಯರಿಗೆ ಸಹಾಯವಾಗುವ ನಿಟ್ಟಿನಲ್ಲಿ ಬಜೆಟ್‌ನಲ್ಲಿ ಕೇಂದ್ರ ಹಣ ವರ್ಗಾವಣೆ ಮಾಡುವ ಯೋಜನೆಯನ್ನು ಬಜೆಟ್‌ನಲ್ಲಿ ಘೋಷಣೆ ಮಾಡುವ ಸಾಧ್ಯತೆಯಿದೆ. ಮಹಿಳೆಯರಿಗೆ ಹಣಕಾಸಿನ ಸಹಾಯ ಸಿಕ್ಕರೆ ಕುಟುಂಬಕ್ಕೆ ನೆರವಾದಂತಾಗಲಿದೆ ಎನ್ನುವ ಮಾತಿದೆ. ಆದ್ದರಿಂದ ಬೊಕ್ಕಸಕ್ಕೆ ಹೊರೆಯಾಗದಂತೆ ಮಹಿಳೆಯರಿಗಾಗಿಯೇ ಯೋಜನೆ ಆರಂಭಿಸುವ ಸಾಧ್ಯತೆಯಿದೆ. ಆದ್ದರಿಂದ ಮಹಿಳೆಯರಿಗೆ ಸಂಬಂಧಿಸಿದ ಇತರ ರೀತಿಯ ಕಾರ್ಯಕ್ರಮಗಳನ್ನು ಪರಿಶೀಲನೆ ಮಾಡಬೇಕೆಂಬುದು ತಜ್ಞರ ಅಭಿಪ್ರಾಯವಾಗಿದೆ. ರಾಜಕೀಯ ಉದ್ದೇಶದಿಂದ ನೋಡಿದರೆ, ರಾಜಕೀಯ ಪಕ್ಷಗಳು ಮಹಿಳೆಯರನ್ನೇ ತಮ್ಮ ವೋಟು ಬ್ಯಾಂಕ್ ಮಾಡಿಕೊಂಡಿದೆ. ಆದ್ದರಿಂದ ಮಹಿಳೆಯರನ್ನುತಮ್ಮತ್ತಸೆಳೆಯಲು ಹೊಸಹೊಸ ಯೋಜನೆಗಳನ್ನು ಜಾರಿ ಮಾಡುತ್ತಿವೆ. ಈಗಾಗಲೇ ಕರ್ನಾಟಕ, ತಮಿಳುನಾಡು, ಮಹಾರಾಷ್ಟ್ರ ಸೇರಿದಂತೆ ಹಲವು ರಾಜ್ಯಗಳ ವಿಧಾನಸಭೆ ಚುನಾವಣೆಗಳಲ್ಲಿ ಇದೇ ರೀತಿಯ ಮಹಿಳಯರ ಪರ ಯೋಜನೆಗಳು ಘೋಷಣೆಗಳಾಗಿವೆ. ಈಗಾಗಲೇ ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರವು ಗೃಹಲಕ್ಷ್ಮಿ ಯೋಜನೆಯಡಿಯಲ್ಲಿ ಪ್ರತಿ ತಿಂಗಳು ಪ್ರತಿ ಮನೆ ಯಜಮಾನಿಗೆ 2,000 ರೂಪಾಯಿ ಹಾಕುತ್ತಿದೆ. ಈ ಹಣವನ್ನು ಹಲವು ಕುಟುಂಬಗಳ ಮಹಿಳೆಯರು ಸದ್ದುದ್ದೇಶಕ್ಕೆ ಬಳಸಿಕೊಂಡಿರುವ ಉದಾಹರಣೆಗಳಿವೆ. ಗೃಹ ಉಪಯೋಗಿ ವಸ್ತುಗಳು, ಕೃಷಿ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಹಲವರು ಇದೇ ಹಣದಲ್ಲಿ ಬೋರ್‌ವೆಲ್ ಕೊರೆಸಿರುವ ಉದಾಹರಣೆಗಳಿವೆ. ಇನ್ನೂ ಕೆಲವರು ಒಡವೆಗಳು ಸೇರಿದಂತೆ ಮನೆಗೆ ಬೇಕಾದ ಪ್ರಮುಖ ವಸ್ತುಗಳನ್ನು ಕೊಂಡುಕೊಂಡಿದ್ದಾರೆ. ಇದು ಒಂದು ರೀತಿಯಲ್ಲಿ ಒಳ್ಳೆಯ ಯೋಜನೆಯೇ ಆಗಿದೆ. ಮತ್ತೊಂದೆಡೆ ನೋಡೀದಾದ್ರೆ, ರಾಜಕೀಯ ಉದ್ದೇಶದಿಂದ ಮಹಿಳೆಯರ ವೋಟ್ ಪಡೆಯಲು ಸರ್ಕಾರಗಳು ಇಂತಹ ಯೋಜನೆಗಳನ್ನು ರೂಪಿಸುತ್ತಿವೆ ಎನ್ನುವ ಮಾತುಗಳು ಇವೆ.

### ರಸ್ತೆ ಸುರಕ್ಷತಾ ದಿನಾಚರಣೆ ಪ್ರಯುಕ್ತ ಸ್ಪರ್ಧೆಗಳು

■ ಶಿವಮೊಗ್ಗ

ನಗರದಲ್ಲಿ ನಾಗರೀಕರಿಗೆ ರಸ್ತೆ ಸುರಕ್ಷತೆಯ ಬಗ್ಗೆ ಅರಿವು ಮೂಡಿಸಲು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಸಂಸ್ಥೆಯು ಜ.18 ರಂದು ರಸ್ತೆ ಸುರಕ್ಷತಾ ರ‍್ಯಾಲಿ ಹಾಗೂ ಶಿವಮೊಗ್ಗ ತಾಲ್ಲೂಕು ಮಟ್ಟದ ವಿದ್ಯಾರ್ಥಿಗಳಿಗೆ ರಸ್ತೆ ಸುರಕ್ಷತಾ ವಿಷಯದಲ್ಲಿ ಚಿತ್ರಕಲಾ ಸ್ಪರ್ಧೆ, ಘೋಷ ವಾಕ್ಯ ಸ್ಪರ್ಧೆಯನ್ನು ಏರ್ಪಡಿಸಿದೆ. 18 ರ ಶನಿವಾರ ಮಧ್ಯಾಹ್ನ 2 ಗಂಟೆಗೆ ಜಿಲ್ಲಾ ಸ್ಕೌಟ್ ಭವನ, ಬಿ.ಹೆಚ್. ರಸ್ತೆ, ಶಿವಮೊಗ್ಗ ಇಲ್ಲಿ ವಿದ್ಯಾರ್ಥಿಗಳಿಗೆ ರಸ್ತೆ ಸುರಕ್ಷತೆ ಬಗ್ಗೆ ಸ್ಪರ್ಧೆಗಳನ್ನು ಏರ್ಪಡಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆಯುಕ್ತರು (ರೋವರ್) ಕೆ. ರವಿ ಮೊ.ಸಂ : 9663883213 ಮತ್ತು ಜಿಲ್ಲಾ ಕಾರ್ಯದರ್ಶಿ, ಚಂದ್ರಶೇಖರಯ್ಯ ಕೆ.ವಿ ಮೊ.ಸಂ: 9481066064 ಇವರನ್ನು ಸಂಪರ್ಕಿಸಬಹುದೆಂದು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಕಾರ್ಯದರ್ಶಿ ತಿಳಿಸಿದ್ದಾರೆ

# ಜಾನಪದ ಶೈಲಿಯ ದೇವಪುರ ಜಾತ್ರೆ

**ಹೊಸದುರ್ಗ ತಾಲ್ಲೂಕು ದೇವಪುರ ಗ್ರಾಮದಲ್ಲಿ ನೆಲಸಿರುವ ಏಳೂರು ಗ್ರಾಮ ದೇವತೆ ಶ್ರೀ ಕೆರೆಯಾಗಳಮ್ಮ ದೇವಿಯವರ ರಥೋತ್ಸವವು 18 ರಂದು ಶನಿವಾರ ಮುಂಜಾನೆ ಜರುಗಲಿದ್ದು ತನ್ನಿಮಿತ್ತ ಈ ಲೇಖನ**

» **ನಾಗತಿಹಳ್ಳಿಮಂಜುನಾಥ್.**
**ಹೊಸದುರ್ಗ**





ಹೊಸದುರ್ಗ: ಪುರಾಣ ಪ್ರಸಿದ್ಧವೂ, ಚಾರಿತ್ರಿಕ ಹಿನ್ನೆಲೆಯ ಐತಿಹಾಸಿಕ ನೆಲೆಗಟ್ಟಿನ ಸಿರಿಸೊಬಗಿನ ಪ್ರಕೃತಿ ರಮಣೀಯ ಬೀಡಾದ ದೇವಪುರ ಗ್ರಾಮವು ಚಿತ್ರದುರ್ಗ ಜಿಲ್ಲೆ ಹೊಸದುರ್ಗ ತಾಲ್ಲೂಕಿನ ಪ್ರಸಿದ್ಧ ಶ್ರೀ ಹಾಲುರಾಮೇಶ್ವರ ಮಹಾ ಕ್ಷೇತ್ರದ ಸನಿಹದಲ್ಲಿದೆ.

ಹೊಸದುರ್ಗದಿಂದ 8 ಕಿ.ಮೀ ದೂರದಲ್ಲಿರುವ ಈ ಗ್ರಾಮ ಹಲವು ವಿಶಿಷ್ಠಗಳಿಂದ ಕೂಡಿದೆ ಈ ಹಳ್ಳಿಗೆ ಮಹಾ ಮಾನ್ವಿತ ಕೆರೆಯಾಗಳಮ್ಮ ದೇವರು ಗ್ರಾಮದೇವತೆಯಾಗಿದೆ. ಈ ದೇವಿಯವರ ಅಧಿದೇವತೆ ಶ್ರೀ ದೊಡ್ಡಮ್ಮ ದೇವರಾಗಿದ್ದಾರೆ. ಶ್ರೀ ದೊಡ್ಡಮ್ಮನನ್ನು ಹೊರಗಳಮ್ಮ ಎಂದೂ ಕರೆಯುತ್ತಾರೆ. ಒಡಮೂಡಿರುವ ಈ ದೇವರ ದೇವಾಲಯ ಊರ ಹೊರಗೆ ಕೆರೆ ಅಂಗಳದಲ್ಲಿದೆ. ಗುಡಿಯ ಮುಂದೆ ಭಾರಿ ಎತ್ತರದ ಕಲ್ಲಿನ ಉಯ್ಯಾಲೆ ಕಂಬವನ್ನು ನೋಡಬಹುದು.

ದೇವಪುರದ ವೈಶಿಷ್ಟ್ಯವೆಂದರೆ ಇಲ್ಲಿ ಒಂದುನೂರ ಒಂದು ದೇವಾಲಯಗಳಿವೆ. ಎಲ್ಲಿನೋಡಿದರಲ್ಲಿಲಿಂಗಮುದ್ರೆಕಲ್ಲುಗಳಿವೆ. ಹೇರಳವಾಗಿ ಶಿಲಾ ಶಾಸನಗಳಿವೆ. ಈ ಭೂಮಿಯ ಒಡಲಿನಲ್ಲಿ ಅತಿ ಹೆಚ್ಚಿನ ನಿಧಿ ನಿಕ್ಷೇಪಗಳು ಹುದುಗಿರುತ್ತದೆ. ಎಂಬುದು ಜನರ ಭಾವನೆಯಾಗಿದೆ. ಈ ಗ್ರಾಮದ ಮೇಲೆ ವಿಜಯ ನಗರ ಅರಸರ ಪ್ರಭಾವ ಬಿದ್ದಿದೆ. ಇದು ಚಿತ್ರದುರ್ಗದ ಪಾಳೇಗಾರರ ಆಡಳಿತಕ್ಕೆ ಸೇರಿತ್ತು. ಈಗಲೂ ಕೋಟೆ ಕೊತ್ತಲಗಳನ್ನು ಕಾಣಬಹುದು.

ದೇವಪುರ ಗ್ರಾಮ ಪ್ರಾಕೃತಿಕ ಸೌಂಧರ್ಯದಿಂದ ಸುತ್ತುವರೆದಿದೆ. ಊರಿನ ಮುಂದೆಯೇ ಸದಾ ತುಂಬಿ ತುಳುಕುವ ದೊಡ್ಡಕೆರೆ, ಅಡಿಕೆ, ಬಾಳೆ, ತೆಂಗಿನ ತೋಟಗಳು ದಾಳಿಂಬೆ, ಸಪೋಟ ವನಗಳು, ಕನಕಾಂಬರ, ಕಾಕಡ ಹೂವಿನ ಹೊಲಗಳು, ಸಣ್ಣಕ್ಕಿಯ ಭತ್ತದ ಗದ್ದೆಗಳು, ವಿವಿಧ ಪೈರುಗಳಿಂದ ಕಂಗೊಳಿಸುವ ಫಲವತ್ತಾದ ಭೂಮಿ ಗ್ರಾಮದ ಸೌಂಧರ್ಯಕ್ಕೆ ಮೆರುಗು ನೀಡಿದೆ.

ಧಾರ್ಮಿಕವಾಗಿ ಅತ್ಯಂತ ಪ್ರಾಧಾನ್ಯತೆ ಹೊಂದಿರುವ ಈ ಗ್ರಾಮದಲ್ಲಿ ಪ್ರತಿವರ್ಷ ಪುಷ್ಯ ಮಾಸದಲ್ಲಿ ಶ್ರೀ ಕೆರೆಯಾಗಳಮ್ಮನವರ ಜಾತ್ರೆ ಮಹೋತ್ಸವ ಜರುಗುತ್ತದೆ. ಈ ದೇವಿಗೆ ಶ್ರೀ ಸೋಮದೇವರು ಪರಿಚಾರಕರಾಗಿ ಕಾರ್ಯ ನಿರ್ವಹಿಸುತ್ತಾದೆ. ಶೂನ್ಯ ಮಾಸದಲ್ಲಿ ಇಪ್ಪತ್ತು ದಿನಗಳ ಕಾಲ ನಿರಂತರವಾಗಿ ಆಗಮರೀತ್ಯ, ವಿಧಿ ಪೂರ್ವಕವಾಗಿ, ಶಾಸ್ತ್ರೋಕ್ತವಾಗಿ ನಡೆಯುವ ಜಾತ್ರೆಗೆ ಶ್ರೀ ಸೋಮದೇವರೆ ಕೇಂದ್ರ ಬಿಂದು.

ಪ್ರತಿಯೊಂದು ಕಲಾಪವೂ ಶ್ರೀ ಸೋಮನ ಅನುಗ್ರಹದಂತೆಯೇ ಜರುಗುತ್ತದೆ. ಶ್ರೀ ಸೋಮನಿಲ್ಲದೆ ಯಾವ ಕೆಲಸವೂ ನಡೆಯುವುದಿಲ್ಲ. ಶ್ರೀ ಕೆರೆಯಾಗಳಮ್ಮ ಮತ್ತು ಶ್ರೀ ದೊಡ್ಡಮ್ಮನ ಅಣತಿಯಂತೆ ಶ್ರೀ ಸೋಮದೇವರು ಕಾರ್ಯ ನಿರ್ವಹಿಸುತ್ತದೆ.





ಶ್ರೀ ಸೋಮ ಹೊರಟರೆ ಅಬಾಲ ವೃದ್ಧರಲ್ಲಿ ವಿದ್ಯುತ್ ಸಂಚಲನವಾದಂತೆ ಹುರುಪು, ಹುಮ್ಮಸ್ಸು ಮೂಡುತ್ತದೆ. ಶ್ರೀ ಸೋಮನ ಕುಣಿತ ಅತ್ಯಾಕರ್ಷಕ, ಅವಿಸ್ಮರಣೀಯ, ಇದರ ಕುಣಿತಕ್ಕೆ ಮುದಾಲಸಿ ಎನ್ನುತ್ತಾರೆ. ಮುದಾಲಸಿ ವೀಕ್ಷಿಸಿದಷ್ಟೂ ಸವಿ ಹೆಚ್ಚುತ್ತಲೇ ಇರುತ್ತದೆ. ಕುಣಿತ ನೋಡಲು ಗಂಟೆಗಟ್ಟಲೆ ಭಕ್ತರು ನಿಂತಿರುತ್ತಾರೆ.

ಜಾತ್ರೆಗೆ ಶ್ರೀ ಸೋಮ ಹೊರಟರೆ ಕನಿಷ್ಟ ಐದು ಗಂಟೆಗಳ ಕಾಲ ಎಡೆಬಿಡದೆ ಕುಣಿತ ಉತ್ಸವ ನಡೆಯುತ್ತದೆ. ಊರುಮೆ, ಡೋಲು, ಹಲಗೆ, ಓಲಗ ಕಹಳೆ. ತಮಟೆ, ಕರಡಿ ವಾದ್ಯಗಳ ಬಡಿತಕ್ಕೆ ಶ್ರೀ ಸೋಮ ಉಯ ಬದ್ಧವಾಗಿ ಕುಣಿಯುತ್ತದೆ. ಶ್ರೀ ಸೋಮ ದೇವರ ಉಡಿಗೆ, ತೊಡಿಗೆ ವಿಶಿಷ್ಠ ರೀತಿಯಲ್ಲಿರುತ್ತದೆ. ಶ್ರೀ ಸೋಮನ ಮುಖವಾಡಕ್ಕೆ ಮೂರು ಹಂತದ ಖಂಕ ಹಾಕಿರುತ್ತಾರೆ. ಖಂಕದ ಬಟ್ಟೆಗೆ ಬೆಳ್ಳಿ ಗುಂಡು, ಗಂಟೆ, ಹಲಗೆಯಿಂದ ಶೃಂಗರಿಸಿ ಬೆಳ್ಳಿ ಹಣೆಪಟ್ಟಿ ಹಾಕಿರುತ್ತಾರೆ. ಖಂಕಕ್ಕೆ ಬೇವಿನ ಸೊಪ್ಪು, ಹೊಂಬಾಳೆ ಮುಡಿಸಿ, ಹಣಪಟ್ಟಿಗೆ ಹೂಮಾಲೆಯಿಂದ ಅಲಂಕರಿಸಿರುತ್ತಾರೆ.

ಖಂಕದಿಂದ ಸೋಮನ ಎರಡೂ ಬದಿಗೆ ಏಳು ಬಣ್ಣದ ರೇಶ್ಮೆ ಜರಿ ಸೀರೆ ಇಳಿ ಬಿಟ್ಟಿರುತ್ತಾರಎ. ಶ್ರೀ ಸೋಮ ಪೀತಾಂಬರ ಉಟ್ಟು, ಬಿಳಿ ನಿಲುವಂಗಿ ಧರಿಸಿ, ಕೈಗೆ ಬೆಳ್ಳಿ ಕಡಗ, ಕಾಲಿಗೆ ಗೆಜ್ಜೆ, ಕೊರಳಿಗೆ ಬೆಳ್ಳಿ ಪದಕ ಸೊಂಟಕ್ಕೆ ಬೆಳ್ಳಿ ಪಟ್ಟಿ ಧರಿಸುತ್ತದೆ.

ಸೋಮದೇವರ ವಂಶಸ್ಥರಾದ ಮುದ್ರೆ ಹಾಕಿರುವ ಗುರಪ್ಪ ಎಂಬುವರು ಮಾತ್ರ ಶ್ರೀ ಸೋಮನನ್ನು ಧರಿಸುತ್ತಾರೆ. ಒಮ್ಮೆ ಹೊರಟ ಮೇಲೆ ಇಡೀ ಕಾರ್ಯಕ್ರಮ ಮುಗಿಯುವ ವರೆಗೆ ಮುಖವಾಡ ತೆಗೆಯಲು ಬರುವುದೇ ಇಲ್ಲ ಇದು ಶ್ರೀ ಸೋಮನ ವಿಶಿಷ್ಟ ನಿಯಮ.

ಈ ದೇವರ ಜಾತ್ರೆ ಪ್ರತಿ ವರ್ಷ ಪುಷ್ಯ ಮಾಸದ ಅಮಾವಾಸ್ಯೆಯಾದ ನಂತರ ಬರುವ ಶನಿವಾರದಿಂದ ಚಾಲನೆ ಯಾಗುತ್ತದೆ. ಇದನ್ನೇ ಅಮ್ಮ ಸಲೆ ಹೊರಡುವುದು ಎನ್ನುತ್ತಾರೆ. ಸಲೆ ಹೊರಡುವ ಮೂಲ ಸ್ಥಾನ ಶ್ರೀ ದೊಡ್ಡಮ್ಮನ ಸನ್ನಿಧಿಯಲ್ಲಿ ಶ್ರೀ ಸೋಮನ ಖಂಕಹಾಕಿ, ವಿಶೇಷ ಪೂಜೆ ಮಾಡಿ ರಾತ್ರಿ ಗ್ರಾಮದ ಊರು ಬಾಗಿಲಿನಲ್ಲಿ ವಾಸ್ತವ್ಯ ಮಾಡುತ್ತದೆ.

ರಾತ್ರಿ ಸುಮಾರು ಹತ್ತು ಗಂಟೆಗೆ ಅಲ್ಲಿ ಶ್ರೀ ಸೋಮ ಹೊರಟು ಊರುಬಾಗಿಲಿನ ಮೂಲಕ ಊರಿನ ದೇವಾಲಯ, ಗಣ್ಯರ ಮನೆಗಳಿಗೆ ತೆರಳಿ ಪೂಜೆ ಸ್ವೀಕರಿಸಿ ಮಧ್ಯರಾತ್ರಿ ಸುಮಾರು ಎರಡು ಗಂಟೆಗೆ ದೇವಿ ಸನ್ನಿಧಿಯಾದ ಹೊನ್ನೇನಹಳ್ಳಿ ಗ್ರಾಮಕ್ಕೆ ಬಿಜಯುಂಗೈಯುವರು. ಅಲ್ಲಿ ಅಂದು ರಾತ್ರಿ ವೈಶಿಷ್ಟ್ಯಪೂರ್ಣವಾದ ಆರುತಿಬಾನೋತ್ಸವವುಮುಂಜಾನೆವರೆಗೂ ನಡೆಯುತ್ತದೆ.

ನಂತರ ಸೋಮವಾರ ನಾಗತೀಹಳ್ಳಿ, ಮಂಗಳವಾರ ಮಸಣೀಹಳ್ಳಿ, ಹುಲ್ಲುಕಟ್ಟೆ, ದೇವರಹಟ್ಟಿ, ಮೂಡ್ಲಬೋವಿಹಟ್ಟಿ, ಬೇಟಿ ನೀಡಿ ಶನಿವಾರ ಕೋಡಿಹಳ್ಳಿ, ಭಾನುವಾರ ನರಸೀಪುರದ ಆರತಿಬಾನೋತ್ಸವವು ಸಡಗರ ಸಂಭ್ರಮಗಳಿಂದ ಭವ್ಯ ರೀತಿಯಲ್ಲಿ ನಡೆಯುವುದು.

ತನ್ನ ಹತ್ತು ಒಕ್ಕಲು ಗ್ರಾಮಗಳ ಆರತಿ ಉತ್ಸವಮುಗಿಸಿಕೊಂಡುನಸರೀಪುರದಿಂದ ಸೋಮವಾರ ಮುಂಜಾನೆ ಶ್ರೀದೊಡ್ಡಮ್ಮನ ಗುಡಿಗೆ ದೇವರು ಆಗಮನ ಅಂದು ಅಲ್ಲಿ ದೇವರ ಮೆರವಣಿಗೆ ಶಾಸ್ತ್ರ ಜರುಗುವುದು.

ಮಂಗಳವಾರ ಮುಂಜಾನೆ ಸೂರ್ಯೋದಯಕ್ಕೆ ಸರಿಯಾಗಿ ದೇವರ ಪುಷ್ಪಾಲಂಕೃತ ಪಲ್ಲಕ್ಕಿ ಪುರಪ್ರವೇಶವಾಗುತ್ತದೆ. ದೇವಿ ಆಹ್ವಾನಕ್ಕೆ ಇಡೀ ಊರಿನ ಮನೆ ಅಂಗಳ ರಂಗವಲ್ಲಿ ಚಿತ್ತಾರದಿಂದಕಂಗೊಳಿಸುತ್ತಿರುತ್ತದೆ.ಅಂದು ರಾತ್ರಿ ಮತ್ತೆ ಶ್ರೀದೊಡ್ಡಮ್ಮನ ಗುಡಿಯಲ್ಲಿ ದೊಡ್ಡ ಬಾನೋತ್ಸವ ನಡೆಯುವುದು.

ಬುಧವಾರ ಅತ್ಯಂತ ಜಾಗೃತವಾದ ಹಾಗೂ ಮಹಾ ಮಾಹಿಮಾನ್ವಿತ ಪವಿತ್ರ ಕೀಲು ಬಾನೋತ್ಸವವು ಶ್ರದ್ಧಾ ಭಕ್ತಿಗಳಿಂದ ಜರುಗುತ್ತದೆ. ಗುರುವಾರ ರಾತ್ರಿ ಹೂವಿನ ಅಡ್ಡ ಪಲ್ಲಕ್ಕಿ ಉತ್ಸವ ಭವ್ಯವಾಗಿ ನಡೆಯುವುದು.

ಶುಕ್ರವಾರ ಸಂಜೆ ಧೂಳು ಉಚ್ಚಾಯ, ಮತ್ತು ರಾತ್ರಿ ದೊಡ್ಡ ರಥೋತ್ಸವ ಅದ್ಧೂರಿಯಿಂದ ವಿಜೃಂಭಿಸುತ್ತದೆ. ಭಾನುವಾರ ಮದ್ಯಾಹ್ನ ಹಗಲು ಪಲ್ಲಕ್ಕಿ (ಹಾಲ್ಪಲ್ಲಕ್ಕಿ) ಉತ್ಸವ ವೈಶಿಷ್ಟ್ಯಪೂರ್ಣವಾಗಿ ನಡೆಯುವುದು. ಇದೇ ಈ ಜಾತ್ರೆಯ ಪ್ರಮುಖ ಪರುಷೆಯಾಗಿರುತ್ತದೆ. ಈ ಉತ್ಸವಕ್ಕೆ ಸುತ್ತಲ ಹತ್ತು ಹಳ್ಳಿ ಜನರೂ ಕಿಕ್ಕಿರಿದು ಸೇರುತ್ತಾರೆ.

ಸೋಮವಾರ ರಾತ್ರಿ ಬೆಲ್ಲದರಾಶಿ ಮತ್ತು ಸೂರ್ಯಮಂಡಲಉತ್ಸವನಡೆಯುವುದು. ನಂತರ ನಡೆಯುವ ಶ್ರೀಸೋಮನ ಓಕಳಿ ತುಂಬಾ ಜನಾಕರ್ಷಣೆಯಿಂದ ಕೂಡಿರುತ್ತದೆ. ರಾಶಿ ರಾಶಿ ಹರಕೆ ಬೆಲ್ಲವನ್ನು ಪ್ರಸಾದ ರೂಪದಲ್ಲಿ ಹಂಚುತ್ತಾರೆ.

ಪ್ರತಿಯೊಂದು ಉತ್ಸವಕ್ಕೂ ಒಂದೊಂದು ಜಾಗ ನಿಗದಿಯಾಗಿರುತ್ತದೆ. ನಿಗದಿತ ಸ್ಥಳದಲ್ಲೇ ಕಲಾಪ ನಡೆಯುವುದು. ಪ್ರತಿಯೊಂದು ದಿನದ ಸೇವೆಗೂ ಸೆಲೆ ಹೋಗುವ ಗ್ರಾಮ ಮತ್ತು ದೇವಪುರದ ಒಂದು ಕೋಮಿನವರು ಸೇವಾಕರ್ತರಾಗಿರುತ್ತಾರೆ.

ಮತ್ತೆ ಬುಧವಾರ ಶ್ರೀದೊಡ್ಡಮ್ಮನ ಗುಡಿ ಬಾಗಿಲು ಹಾಕಿ ಶ್ರೀಸೋಮನ ಖಂಕ ತೆಗೆಯುತ್ತಾರೆ.ಶುಕ್ರವಾರಶ್ರೀಕೆರೆಯಾಗಳಮ್ಮ ದೇವರು ಮಂಚ ಏರುತ್ತಾರೆ.

ಭಕ್ತರು ತಮ್ಮ ಕಷ್ಟ ಸುಖಗಳಿಗೆ, ಆಗು ಹೋಗುಗಳಿಗೆ ತೊಂದರೆ ನಿವಾರಣೆಗೆ, ಆರೋಗ್ಯ, ವಿದ್ಯೆ ವವಾಹ ಆಸ್ತಿ ಖರೀದಿ, ನೌಕರಿ, ವ್ಯಾಪಾರ ವಹಿವಾಟು ಹೀಗೆ ಎಲ್ಲಾ ವಿಚಾರಕ್ಕೂ ಶ್ರೀಸೋಮನ ಬಳಿ ಹೇಳೀಕೆ ಕೇಳುತ್ತಾರೆ. ಭಕ್ತರ ಪ್ರಶ್ನೆಗಳಿಗೆ ಈ ದವಿವರು ನಿಖರವಾಗಿ ಕರಾರುಬದ್ಧವಾಗಿ ಕಟ್ಟು ನಿಟ್ಟಾಗಿ ಉತ್ತರಿಸುತ್ತದೆ. ಇದರ ಹೇಳಿಕೆಗಳು ಇದುವರೆಗೂ ಹುಸಿಯಾಗದಿರುವುದೇ ದೇವರ ವಿಶಿಷ್ಠ ದೈವಿ ಶಕ್ತಿಯಾಗಿದೆ.

## ಪ್ರಮುಖ ಸುದ್ದಿ

### ಗ್ರಾಮ ಆಡಳಿತ ಅಧಿಕಾರಿಗಳ ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ 32 ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಗಳನ್ನು ನೇಮಕಾತಿ ಮಾಡುವ ಕುರಿತಂತೆ ತಾತ್ಕಾಲಿಕ 1:1 ಆಯ್ಕೆಪಟ್ಟಿ ಹಾಗೂ ಹೆಚ್ಚುವರಿ ಆಯ್ಕೆಪಟ್ಟಿ ಪ್ರಕಟಿಸಲಾಗಿದ್ದು, ತಾತ್ಕಾಲಿಕ ಆಯ್ಕೆಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ಜ.23 ಕೊನೆಯ ದಿನವಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

ಕಂದಾಯ ಇಲಾಖೆಯಲ್ಲಿನ ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನೇಮಕಾತಿ ಅಧಿಸೂಚನೆಯನ್ನು ಹೊರಡಿಸಿ ಸ್ಪರ್ಧಾತ್ಮಕ ಪರೀಕ್ಷೆಯ ಮುಖಾಂತರ ಅರ್ಹರಾದ ಅಭ್ಯರ್ಥಿಗಳ ಅಂತಿಮ ಅಂಕಪಟ್ಟಿಯನ್ನು ಜಿಲ್ಲಾವಾರು ಪ್ರಕಟಿಸಿರುತ್ತಾರೆ.ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021ರಂತೆ ಚಿತ್ರದುರ್ಗ ಜಿಲ್ಲೆಗೆ ಅರ್ಹತೆ ಪಡೆದಿರುವ ಒಟ್ಟು 1158 ಅಭ್ಯರ್ಥಿಗಳ ಪೈಕಿ ಚಿತ್ರದುರ್ಗ ಜಿಲ್ಲಾ ಕಂದಾಯ ಘಟಕಕ್ಕೆ ಈಗಾಗಲೇ ಅನುಮೋದನೆ ಯಾಗಿರುವ 32 ಹುದ್ದೆಗಳಿಗೆ ಪ್ರಾಧಿಕಾರ ನೀಡಿರುವ ಮೆರಿಟ್ ಪಟ್ಟಿಯಲ್ಲಿ 1:3 ಅನುಪಾತದಂತೆ ದಾಖಲಾತಿ ಪರಿಶೀಲನೆಗೆ ಆಹ್ವಾನಿಸಿ, ದಾಖಲಾತಿ ಪರಿಶೀಲಿಸಿ 1:1 ಅನುಪಾತದಂತೆ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಪ್ರಕಟಿಸಿ, ಆಕ್ಷೇಪಣೆಗಳಿಗೆ ಅವಕಾಶ ನೀಡಿ ನಂತರ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಿ ಸಿಂಧುತ್ವ ಪ್ರಮಾಣ ಪತ್ರ ಮತ್ತು ಪೊಲೀಸ್ ವರದಿ, ಪಿಯುಸಿ/12ನೇ ತರಗತಿಯ ಅಂಕಪಟ್ಟಿಯ ನೈಜತೆ ಪರಿಶೀಲಿಸಿಕೊಂಡು ನೇಮಕಾತಿ ಆದೇಶ ನೀಡಲು ನಿರ್ದೇಶನ ನೀಡಿರುತ್ತಾರೆ.

ಚಿತ್ರದುರ್ಗ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ 32 ಗ್ರಾಮ ಆಡಳಿತ ಅಧಿಕಾರಿಗಳ ನೇರ ನೇಮಕಾತಿಗೆ ಸಂಬಂಧಿಸಿದಂತೆ ತಾತ್ಕಾಲಿಕ ಅರ್ಹ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆಗಾಗಿ ಅಯ್ಕೆಪಟ್ಟಿಯನ್ನು ಸರ್ಕಾರ ನಿಗಧಿಪಡಿಸಿದ ಮೀಸಲಾತಿ ರೋಸ್ಟರ್ ನಿಯಮದ ಪ್ರಕಾರ ಹಾಗೂ ಸರ್ಕಾರದ ಸುತ್ತೋಲೆಯಲ್ಲಿನ ನಿರ್ದೇಶನದಂತೆ 32 ಹುದ್ದೆಗಳಿಗೆ 1:3 ಅನುಪಾತದಲ್ಲಿ 96 ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸಬೇಕಾಗಿದ್ದು, ಪ್ರವರ್ಗ–2ಎ ಮೀಸಲಾತಿಯ ಅಂಗವಿಕಲ ಅಭ್ಯರ್ಥಿಗಳಲ್ಲಿ ಕೇವಲ 2 ಅಭ್ಯರ್ಥಿಗಳು ಮಾತ್ರ ಲಭ್ಯವಿದ್ದು, ಪರಿಶಿಷ್ಟ ಜಾತಿ ಮೀಸಲಾತಿಯಲ್ಲಿ ಅಂಗವಿಕಲ ಅಭ್ಯರ್ಥಿ ಇಲ್ಲದ ಕಾರಣ ಒಟ್ಟು 92 ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ.ಈ ಪೈಕಿ ಪ.ಜಾತಿ–ಅಂಗವಿಕಲ ಮೀಸಲಾತಿಯ ಅಭ್ಯರ್ಥಿಗಳು ಇಲ್ಲದೇ ಇರುವುದರಿಂದ ಈ ಹುದ್ದೆಯನ್ನು ಬ್ಯಾಕ್‌ಲಾಗ್ ಎಂದು ಪರಿಗಣಿಸಿದೆ. ಮುಂದುವರೆದು ದಾಖಲಾತಿ ಪರಿಶೀಲನೆಗಾಗಿ 92 ಅಭ್ಯರ್ಥಿಗಳ ಪೈಕಿ 6 ಅಭ್ಯರ್ಥಿಗಳು ಗೈರು ಹಾಜರಾಗಿದ್ದು, ಹಾಜರಾದ 86 ಅಭ್ಯರ್ಥಿಗಳ ದಾಖಲಾತಿಗಳನ್ನು ಪರಿಶೀಲಿಸಲಾಗಿದೆ.86 ಅಭ್ಯರ್ಥಿಗಳ ಪೈಕಿ ಅಇಖಿ ಓಂ ಗಿ05788716 ಪ್ರಿಯದರ್ಶಿನಿ ಜಿ.ಎಂ, ಇವರು ಪರಿಶಿಷ್ಟ ಜಾತಿ (ಮಹಿಳಾ–2) ಕೋಟಾದಡಿ ಆಯ್ಕೆಯಾಗಿದ್ದು, 2025ರ ಜ.10ರಂದು ಖುದ್ದು ಹಾಜರಾಗಿ ಗ್ರಾಮ ಆಡಳಿತ ಅಧಿಕಾರಿ ಹುದ್ದೆಯನ್ನು ರದ್ದುಗೊಳಿಸಿ ಮೂಲ ದಾಖಲಾತಿ ಮೂಲ ದಾಖಲಾತಿ ಹಿಂದಿರುಗಿಸುವಂತೆ ಮನವಿ ಸಲ್ಲಿಸಿರುವ ಹಿನ್ನಲೆಯಲ್ಲಿ ಇವರ ಆಯ್ಕೆಯನ್ನು ರದ್ದುಪಡಿಸಿದ್ದು, ಪರಿಶೀಲನೆಯಲ್ಲಿ ಪೂರಕ, ಸಮರ್ಪಕ ದಾಖಲಾತಿಗಳನ್ನು ಸಲ್ಲಿಸಿರುವ ಅರ್ಹ ಅಭ್ಯರ್ಥಿಗಳ 1:1 ರ ಅನುಪಾತದಲ್ಲಿ 31 ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆಪಟ್ಟಿ ಹಾಗೂ 54 ಅಭ್ಯರ್ಥಿಗಳ ಕಾಯ್ದಿರಿಸಿದ ಆಯ್ಕೆಪಟ್ಟಿಯೊಂದಿಗೆ ಗೈರುಹಾಜರಿ, ತಿರಸ್ಕೃತ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸಿದೆ.ಅಭ್ಯರ್ಥಿಗಳು ತಾತ್ಕಾಲಿಕ ಆಯ್ಕೆಪಟ್ಟಿ ಹಾಗೂ ಕಾಯ್ದಿರಿಸಿದ ಪಟ್ಟಿಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಇದೇ ಜ.23ರೊಳಗಾಗಿ ಆಕ್ಷೇಪಣೆಗಳನ್ನು ಪುಷ್ಠಿಕರಿಸುವ ದಾಖಲಾತಿಗಳೊಂದಿಗೆಜಿಲ್ಲಾಧಿಕಾರಿಗಳಕಚೇರಿಗೆ ಮುದ್ದಾಂ ಸಲ್ಲಿಸಲು ಸೂಚಿಸಿದೆ. ತಪ್ಪಿದಲ್ಲಿ ನಿಮ್ಮ ಆಕ್ಷೇಪಣೆಗಳು ಏನು ಇರುವುದಿಲ್ಲವೆಂದು ಭಾವಿಸಿ ಈ ತಾತ್ಕಾಲಿಕ ಆಯ್ಕೆಪಟ್ಟಿ ಹಾಗೂ ಕಾಯ್ದಿರಿಸಿದ ಪಟ್ಟಿಯನ್ನೇ ಅಂತಿಮಗೊಳಿಸಲಾಗುವುದು ಎಂದು ತಿಳಿಯಪಡಿಸಿದೆ.

ಆಯ್ಕೆಪಟ್ಟಿಯಲ್ಲಿ ಹೆಸರು ಸೇರ್ಪಡೆ ಇದ್ದ ಮಾತ್ರಕ್ಕೆ ಅಭ್ಯರ್ಥಿಗಳಿಗೆ ನೇಮಕಾತಿಯ ಬಗ್ಗೆ ಯಾವುದೇ ಹಕ್ಕು ಸಾಧಿಸಲು ಬರುವುದಿಲ್ಲ. ಮೂಲ ದಾಖಲೆಗಳ ಪರಿಶೀಲನೆಯ ಸಮಯದಲ್ಲಿ ಅಭ್ಯರ್ಥಿಗಳ ದಾಖಲೆಗಳಲ್ಲಿ ಲೋಪದೋಷಗಳೇನಾದರೂ ಕಂಡುಬಂದಲ್ಲಿ, ಅಂತಹ ಅಭ್ಯರ್ಥಿಗಳನ್ನು ಸಹ ಆಯ್ಕೆ ಪ್ರಕ್ರಿಯೆಯಿಂದ ಕೈ ಬಿಡಲಾಗುವುದು. ತಾತ್ಕಾಲಿಕ ಆಯ್ಕೆಪಟ್ಟಿ ಹಾಗೂ ಹೆಚ್ಚುವರಿ ಕಾಯ್ದಿರಿಸಿದ ಪಟ್ಟಿ ಮತ್ತು ಗೈರು ಹಾಜರಿ/ ತಿರಸ್ಕೃತ ಅಭ್ಯರ್ಥಿಗಳ ಪಟ್ಟಿಯನ್ನು ಚಿತ್ರದುರ್ಗ ಜಿಲ್ಲಾಧಿಕಾರಿಗಳ ಕಚೇರಿ ಅಧಿಕೃತ ವೆಬ್‌ಸೈಟ್ ಯಣಣಠ://ಛಿಣಡಿಚಿಜಣಡಿಂಚಿ.ಟಿಛಿ.ಎಟ ನಲ್ಲಿ ಮತ್ತು ಚಿತ್ರದುರ್ಗ ಜಿಲ್ಲಾಧಿಕಾರಿಗಳ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

### ತಾಪಂ ಪ್ರಗತಿಪರಿಶೀಲನಾ ಸಭೆ: ಜನವರಿ ಅಂತ್ಯದೊಳಗೆ ತಾಲ್ಲೂಕಿಗೆ ತುಂಗಾ ಹಿನ್ನೀರು?



» **ಚಳ್ಳಕೆರೆ**

ತಾಲ್ಲೂಕಿನಾದ್ಯಂತ ನಿರಂತರವಾಗಿ ಸಾರ್ವಜನಿಕರಿಗೆ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರು ಸಮೃದ್ಧವಾಗಿ ಸಿಗಬೇಕೆಂಬ ದೃಷ್ಠಿಯಿಂದ ಜಲಜೀವನ್ ಮಿಷನ್ ಯೋಜನೆಯಡಿ ಪ್ರತಿ ಗ್ರಾಮದ ಪ್ರತಿಮನೆಗೂ ಪೈಪ್‌ಲೈನ್ ಮೂಲಕ ನೀರು ಹರಿಸುವ ಯೋಜನೆ ಪ್ರಗತಿಯಲ್ಲಿದೆ. ಜನವರಿ ಅಂತ್ಯದೊಳಗೆ ಜನರಿಗೆ ಈ ಯೋಜನೆಯಿಂದ ಸಮೃದ್ಧವಾಗಿ ನೀರು ದೊರಕಲಿದೆ ಎಂದು ತಾಲ್ಲೂಕು ಪಂಚಾಯಿತಿ ಆಡಳಿತಾಧಿಕಾರಿ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಡಾ.ಟಿ.ಮಂಜುನಾಥ ತಿಳಿಸಿದರು. ಅವರು, ಗುರುವಾರ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ತಾಲ್ಲೂಕು ಮಟ್ಟದ ಅಧಿಕಾರಿಗಳ ಪ್ರಗತಿಪರಿಶೀಲನಾ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಪ್ರತಿಯೊಂದು ಗ್ರಾಮದಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗದಂತೆ ಜಾಗ್ರತೆ ವಹಿಸಬೇಕಿದೆ. ವಿಶೇಷವಾಗಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಲೆಕ್ಕಾಧಿಕಾರಿಗಳು ವಿಶೇಷ ಗಮನಹರಿಸಬೇಕು. ಸರ್ಕಾರದಿಂದ ವಿವಿಧ ಯೋಜನೆಗಳ ಅನುಷ್ಠಾಕ್ಕೆ ಬಿಡುಗಡೆಯಾಗುವ ಹಣ ಪೂರ್ಣಪ್ರಮಾಣದಲ್ಲಿ ಸದ್ವಿನಿಯೋಗಬೇಕೆಂದು ತಿಳಿಸಿದರು.

ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಶಶಿಧರ ಮಾತನಾಡಿ, ತಾಲ್ಲೂಕು ಮಟ್ಟದ ಪ್ರಗತಿ ಪರಿಶೀಲನಾ ಸಭೆ ಆಡಳಿತಾಧಿಕಾರಿ ನೇತೃತ್ವದಲ್ಲಿ ನಡೆಯುತ್ತಿದೆ. ತಾಲ್ಲೂಕಿನಾದ್ಯಂತ ವಿವಿಧ ಗ್ರಾಮ ಪಂಚಾಯಿತಿಯಲ್ಲಿ ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರ ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಹಣ ಬಿಡುಗಡೆ ಮಾಡಲಿದೆ. ಯಾವುದೇ ಯೋಜನೆ ಅನುಷ್ಠಾನವಾಗಲಿ ಅದರ ಪ್ರಯೋಜನವನ್ನು ಸಾರ್ವಜನಿಕರು ಪಡೆಯುವಂತಾಗಬೇಕು ಎಂದರು. ಪ್ರಗತಿಪರಿಶೀಲನಾ ಸಭೆಯಲ್ಲಿ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಜೆ.ಅಶೋಕ್, ತೋಟಗಾರಿಕೆಅಧಿಕಾರಿ ವಿರೂಕ್ಷಪ್ಪ,ಪಶು ಇಲಾಖೆ ಅಧಿಕಾರಿ ಡಾ.ರೇವಣ್ಣ, ಸಮಾಜ ಕಲ್ಯಾಣಾಧಿಕಾರಿ ದೇವ್ಲಾನಾಯ್ಕ,ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T